# ಹಂಪಿ ಟೈಮ್ಸ್
HAMPI TIMES

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

ಕನ್ನಡ ದಿನಪತ್ರಿಕೆ
KANNADA DAILY



With Your support we reach
30,000+
HAMPI TIMES epaper readers
ನಿಮ್ಮ ನೆಚ್ಚಿನ ಗ್ರಾಹಕರಿಗೆ ನಿಮ್ಮ ಉತ್ಪನ್ನ ಹಾಗೂ ಸೇವೆಯ ಮಾಹಿತಿ ತಲುಪಿಸಲು ಸಂಪರ್ಕಿಸಿ
PRINT & DIGITAL Advertisement
Valmiki Circle, Hosapete-583201
9448633038
hampitimes@gmail.com
www.hampitimes.com
epaper.hampitimes.com





ಸಂಪುಟ:01 Volume:01 • ಸಂಚಿಕೆ:182 Issue:182 • ನೋಂದಣಿ ನಂ.:KARKAN27911 Reg.No:KARKAN27911 • ವಿಜಯನಗರ VIJAYANAGARA • 13.12.2023 • ಬುಧವಾರ Wednesday • ಪುಟ:04 Page:04 • ಬೆಲೆ:2 Rs:2


**ಮೈಕ್ರೋ ನ್ಯೂಸ್**

## ಹೊಸಪೇಟೆಯಲ್ಲಿ ಮಾಶಿಕ ಶಿವಾನುಭವ ಸಂಪದ



**ಹಂಪಿ ಟೈಮ್ಸ್ ಹೊಸಪೇಟೆ:**
ನಗರದ ಶ್ರೀ ಕೊಟ್ಟೂರುಸ್ವಾಮಿ ಸಂಸ್ಥಾನ ಮಠದಲ್ಲಿ ಡಿ.16 ರಂದು ಸಂಜೆ 7 ಗಂಟೆಗೆ, ಜಗದ್ಗುರು ಡಾ.ಸಂಗನಬಸವ ಮಹಾಸ್ವಾಮಿಗಳವರ 86ನೇ ಜಯಂತಿ ಮಹೋತ್ಸವ, ಶ್ರೀ ಕೊಟ್ಟೂರೇಶ್ವರರ ಕಾರ್ತಿಕ ಮಂಗಲೋತ್ಸವ ಸಮಾರಂಭ ನಿಮಿತ್ತ ಮಾಶಿಕ ಶಿವಾನುಭವ ಸಂಪದ–1158 ಜರುಗಲಿದೆ. ಜಗದ್ಗುರು ಶ್ರೀ ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು ಸಾನ್ನಿಧ್ಯವಹಿಸುವರು. ದರೂರು ಶ್ರೀ ಸಂಗನಬಸವೇಶ್ವರ ವಿರಕ್ತಮಠದ ಕೊಟ್ಟೂರು ಮಹಾಸ್ವಾಮಿಗಳು, ಗರಗನಾಗಲಾಪುರ ಶಾಖಾಮಠದ ಶ್ರೀ ನಿರಂಜನಪ್ರಭು ದೇಶಿಕರು ಉಪಸ್ಥಿತರಿರಲಿದ್ದಾರೆ. ಮುಖ್ಯೋಪಾಧ್ಯಾಯರಾದ ಡಾ. ಅಕ್ಕಮಹಾದೇವಿ ಆರ್.ಎಸ್. ಉಪನ್ಯಾಸ ನೀಡಲಿದ್ದಾರೆ ಎಂದು ಶ್ರೀ ಜಗದ್ಗುರು ಕೊಟ್ಟೂರುಸ್ವಾಮಿ ಸಂಸ್ಥಾನ ಮಠ ತಿಳಿಸಿದೆ.

# ಜಾನಪದ ಕಲಾ ತಂಡಗಳಿಂದ ಶಿಕ್ಷಣಾರೋಗ್ಯ ಸೇವೆ ಅರಿವು

**ಡಿಸಿ ದಿವಾಕರ ಹೇಳಿಕೆ । ವಿಭಾಗೀಯ ಮಟ್ಟದಜಾನಪದ ಕಲಾತಂಡಗಳ ತರಬೇತಿ ಕಾರ್ಯಾಗಾರಕ್ಕೆ ಚಾಲನೆ**



**ಹಂಪಿ ಟೈಮ್ಸ್ ಹೊಸಪೇಟೆ**
ಜಾನಪದ ಕಲೆ ಮೂಲಕ ಜನಸಾಮನ್ಯರಿಗೆ ಆರೋಗ್ಯ ಸೇವೆಗಳ ಕುರಿತು ಅರಿವು ಮೂಡಿಸಲು ಎಲ್ಲಾ ಕಲಾತಂಡಗಳು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕನ್ನಡ ವಿಶ್ವವಿದ್ಯಾಲಯ ಹಂಪಿ ವಿದ್ಯಾರಣ್ಯ, ಕಮಲಾಪುರ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಂಪಿ ಕನ್ನಡ ವಿಶ್ವವಿದ್ಯಾಲಯದ ಭುವನ ವಿಜಯದಲ್ಲಿ ಏರ್ಪಡಿಸಿದ್ದ ಕಲಬುರಗಿ ವಿಭಾಗೀಯ ಮಟ್ಟದ ಜಾನಪದ ಕಲಾತಂಡಗಳ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ಸರ್ಕಾರದ ಯೋಜನೆಗಳು, ಕಾರ್ಯಕ್ರಮಗಳು ಸಾರ್ವಜನಿಕರ ಗಮನಕ್ಕೆ ಬರಲಿ ಎಂಬ ಉದ್ದೇಶದಿಂದ ಜಾಹೀರಾತು, ಆಡಿಯೋಜೀಂಗಲ್ಸ್, ಎಲ್.ಇ.ಡಿ ಮೂಲಕ ವಿಡಿಯೋ ಭಿತ್ತರಿಸುವುದು ಹೀಗೆ ವಿವಿಧ ಬಗೆಗಳಲ್ಲಿ ಮಾಹಿತಿ ನೀಡಲಾಗುತ್ತದೆ. ಗ್ರಾಮೀಣ ಭಾಗದ ಜನ ಸಾಮಾನ್ಯರಿಗೆ ಜಾನಪದ ಕಲಾತಂಡಗಳ ಮೂಲಕ ನೀಡುವ ಅರಿವು ಸುಲಭವಾಗಿ ಸಿಗಲಿದ್ದು, ಈ ಹಿನ್ನೆಲೆಯಲ್ಲಿ ಜಾನಪದಕ್ಕೆ ಒತ್ತು ನೀಡಲಾಗುತ್ತಿದೆ. ಸಂಸ್ಕೃತಿ ಮತ್ತು ಸಂಸ್ಕಾರದ ವಿಚಾರಗಳನ್ನು ಜನರಿಂದ ಜನರಿಗೆ ಹೇಳಬೇಕಾದ ಜನಪದಕಲೆಗಿರುವ ಗಮ್ಮತ್ತು ಬೇರೆ ಕಲೆಗಿಲ್ಲ. ಭಾರತೀಯ ಸಂಸ್ಕೃತಿಯಲ್ಲಿ ಜಾನಪದ ಕಲೆಗೆ ಅತ್ಯಂತ ಪ್ರಾಮುಖ್ಯತೆಯಿದೆ ಎಂದರು.

ದೇಶ ಅಭಿವೃದ್ಧಿಯಾಗಬೇಕಾದರೇ ಶಿಕ್ಷಣ ಮತ್ತು ಆರೋಗ್ಯ ಪ್ರಮುಖ ಪಾತ್ರ ವಹಿಸಲಿವೆ. ಜೀವನದಲ್ಲಿ ಪ್ರತಿಯೊಬ್ಬರಿಗೂ ಆರೋಗ್ಯ ಸೇವೆಗಳು ಅತ್ಯಂತ ಮಹತ್ವದ್ದಾಗಿವೆ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಮೂಲಕ ಅನುಷ್ಠಾನವಾಗುತ್ತಿರುವ ಸರ್ಕಾರದ ವಿವಿಧ ಯೋಜನೆಗಳು, ಸೇವೆಗಳು, ಕಾರ್ಯಕ್ರಮಗಳ ಸದುಪಯೋಗ, ರೋಗಗಳು ಮತ್ತು ಅವುಗಳ ಜಾಗೃತಿ, ಪರಿಹಾರದ ಬಗ್ಗೆ ಜಾನಪದ ಕಲೆ ಮೂಲಕ ತಿಳಿಸಿದಾಗ ಪ್ರತಿಯೊಬ್ಬ ನಾಗರೀಕರ ಮತ್ತು ವಿಶೇಷವಾಗಿ ಗ್ರಾಮೀಣ ಭಾಗದ ಸಾರ್ವಜನಿಕರ ಗಮನ ಸೆಳೆಯುವಂತಾಗುತ್ತದೆ. ಈ ಉದ್ದೇಶದಿಂದ ಜಾನಪದ ಕಲಾತಂಡಗಳ ಮೂಲಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗದ ಕಲಾತಂಡಗಳ ವಿಭಾಗೀಯ ಮಟ್ಟದ ತರಬೇತಿ ಕಾರ್ಯಾಗಾರವನ್ನು ವಿಜಯನಗರ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವುದು ಸಂತಸ ತಂದಿದೆ. ಎಲ್ಲಾ ಕಲಾತಂಡ ದವರು ಈ ತರಬೇತಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡು ಆರೋಗ್ಯ ಸೇವೆಗಳು ಹಾಗೂ ಸರ್ಕಾರದ ಕಾರ್ಯ ಕ್ರಮಗಳನ್ನು ಜನರಿಗೆ ತಲುಪಿಸಲು ಶ್ರಮೀಸಬೇಕು. ಕಲ್ಯಾಣಕರ್ನಾಟಕ ಭಾಗದಲ್ಲಿ ಸ್ವಚ್ಛತೆ, ಆರೋಗ್ಯ, ನೈರ್ಮಲ್ಯದ ಬಗ್ಗೆ ಹೆಚ್ಚು ಅರಿವು ಮೂಡಿಸಬೇಕು ಎಂದು ಹೇಳಿದರು. >> 3

# ಬಳ್ಳಾರಿ ಜೀನ್ಸ್ ಟೆಕ್ಸ್‌ಟೈಲ್ ಪಾರ್ಕ್‌ಗೆ 50ಎಕರೆ ಜಮೀನು

**ಹಂಪಿ ಟೈಮ್ಸ್ ಬೆಳಗಾವಿ ಸುವರ್ಣಸೌಧ**



ಬಳ್ಳಾರಿ ಜಿಲ್ಲೆಯಲ್ಲಿ ಜೀನ್ ಟೆಕ್ಸ್ ಟೈಲ್ ಪಾರ್ಕ್ ಸ್ಥಾಪಿಸಲು ಗೆ ಕೆಐಎಡಿಬಿ ಅವರಿಂದ ಆಲದಹಳ್ಳಿ ಗ್ರಾಮದ ಸರ್ವೆ ನಂ.122/ಎ ರ 50 ಎಕರೆ ಜಮೀನನ್ನು ಬಳ್ಳಾರಿ ಗಾರ್ಮೆಂಟ್ಸ್ ಎಕ್ಸ್‌ಪೋರ್ಟ್ ಕ್ಲಸ್ಟರ್ ಪ್ರೈ.ಲಿ. ಬಳ್ಳಾರಿ ಅವರಿಗೆ ಹಂಚಿಕೆ ಮಾಡಲಾಗಿದೆ ಎಂದು ಎಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ ಇಂದು ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ಸದಸ್ಯ ವೈ.ಎಂ.ಸತೀಶ್ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಸದರಿ ಎಸ್.ಪಿ.ವಿ. ಮುಖಾಂತರ ಜವಳಿ ಪಾರ್ಕ್ ನ್ನು ಸ್ಥಾಪಿಸಲು ಅವಶ್ಯವಿರುವ ಪ್ರಾರಂಭಿಕ ಕ್ರಮಗಳು ಅಂದರೆ, ವಿವಿಧ ಇಲಾಖೆಗಳಿಂದ ಪ್ರಮಾಣ ಪತ್ರಗಳನ್ನು ಹಾಗೂ ಏಖಂಆಃ ಬೆಂಗಳೂರು ರವರಿಂದ ವಿವರವಾದ ಯೋಜನ ವರದಿಗೆ ಅನುಮೋದನೆಯನ್ನು ಪಡೆದ ನಂತರ ಪಾರ್ಕ್‌ನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ಜೀನ್ಸ್ ಪಾರ್ಕ್ ಸ್ಥಾಪನೆಯಿಂದ ಎಲ್ಲಾ ಘಟಕಗಳನ್ನು ಒಂದೇ ಸ್ಥಳದಲ್ಲಿ ಸ್ಥಾಪಿಸಿ ಉತ್ಪನ್ನಗಳ ಗುಣಮಟ್ಟದ ಹೆಚ್ಚಳ ಹಾಗೂ ಉತ್ಪಾದನಾ ವೆಚ್ಚ ಸಾಗಾಣಿಕೆ ವೆಚ್ಚ, ಖಿಣಾಡಿಟಿಚಿಡಿಠಿಣಾಟಿಜ ಞಖಿಜ ನ್ನು ಕಡಿಮೆಗೊಳಿಸಿ, ಸ್ಪರ್ಧಾತ್ಮಕ ದರದಲ್ಲಿ ಜೀನ್ಸ್ ಉತ್ಪನ್ನವನ್ನು ಮಾರುಕಟ್ಟೆಗೆ ಒದಗಿಸುವ ಉದ್ದೇಶ ಹೊಂದಲಾಗಿದೆ ಹಾಗೂ ಸ್ಥಳೀಯ ನಿರುದ್ಯೋಗಿ ಯುವಕ ಯುವತಿಯರಿಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಉದ್ಯೋಗ ಕಲ್ಪಿಸಲಾಗುವುದು ಎಂದು ತಿಳಿಸಿದರು.

# ಡಿ.18ರಂದು ಪಿಂಚಣಿ ಅದಾಲತ್

**ಹಂಪಿ ಟೈಮ್ಸ್ ಹೊಸಪೇಟೆ**
ಅಂಚೆ ಇಲಾಖೆಯಿಂದ ಪಿಂಚಣಿ ಅದಾಲತ್‌ನ್ನು ಡಿ.18ರಂದು ಸಂಜೆ 4 ಗಂಟೆಗೆ ಬಳ್ಳಾರಿ ವಿಭಾಗದಲ್ಲಿ ಆಯೋಜಿಸಲಾಗಿದೆ. ಅಂಚೆ ಇಲಾಖೆಯಿಂದ ನಿವೃತ್ತರಾಗಿ ಸರ್ಕಾರದಿಂದ ಪಿಂಚಣಿ ಪಡೆಯುತ್ತಿರುವ ಇಲಾಖಾ ನೌಕರರಿಗಾಗಿ ಮತ್ತುಕುಟುಂಬ ಪಿಂಚಣಿ ಪಡೆಯುತ್ತಿರುವ ನಿವೃತ್ತ ಅಂಚೆ ನೌಕರರ ಕುಟುಂಬದವರುತಮ್ಮಕುಂದು ಕೊರತೆಗಳನ್ನು ಅಂಚೆ ಅಧೀಕ್ಷಕರು, ಬಳ್ಳಾರಿ ವಿಭಾಗ, ವಿಭಾಗೀಯ ಕಾರ್ಯಾಲಯ ಕೋಟೆ ಬಳ್ಳಾರಿ ಅವರಿಗೆ ಡಿ.18ರ ಮುಂಚಿತವಾಗಿತಲಪುವಂತೆ ಪತ್ರ ಮುಖೇನ ಅಥವಾ ಇ–ಮೇಲ್doballari ka@indiapost.gov.in ಮೂಲಕ ಕಳುಹಿಸಿಕೊಡಬೇಕು ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.




## ವಚನ ಅರಿವು

### ನಿಜ ನೇಮ

**ಅರ್ಚನೆ ಪೂಜನೆ ನೇಮವಲ್ಲ; ಮಂತ್ರ ತಂತ್ರ ನೇಮವಲ್ಲ;**

**ಧೂಪ ದೀಪಾರತಿ ನೇಮವಲ್ಲ;**

**ಪರಧನ ಪರಸ್ತ್ರೀ ಪರದೈವಂಗಳಿಗೆರಗದಿಪ್ಪುದೆನೇಮ.**

**ಶಂಭುಜಕ್ಕೇಶ್ವರನಲ್ಲಿ ಇವು ಕಾಣಿರಣ್ಣಾ ನಿತ್ಯನೇಮ.**

**–ಸತ್ಯಕ್ಕ**

ನೇಮ ಎಂದರೆ ಪದ್ಧತಿ ಎಂದರ್ಥ. ಮನುಷ್ಯ ನೈತಿಕವಾಗಿ ಬದುಕಲು ಪದ್ಧತಿಗಳನ್ನು ರೂಢಿಸಿಕೊಂಡು ಜೀವನ ಮಾಡುವುದನ್ನು ಕಲಿತಿದ್ದಾನೆ. ಅಂತಹ ಪದ್ಧತಿಗಳೇ ಮೌಲ್ಯಗಳಾಗಿವೆ. ಹಿಂದಿನಿಂದಲೂ ಕೆಲವರು ತಮ್ಮ ಬದುಕಿನ ಸ್ವಾರ್ಥಕ್ಕಾಗಿ ಅನೇಕ ಆಚರಣೆಗಳನ್ನು ಹೇರಿರುವುದು ಸಮಾಜದ ಕಣ್ಣಮುಂದಿದೆ. ಇಂತಹ ಆಚರಣೆಗಳಿಂದ ಜನರಿಗೆ ಯಾವುದೇ ಲಾಭವಿಲ್ಲ. ಆದರೂ ದೈವದ ಒಲುಮೆಯನ್ನು ಪಡೆಯಬಹುದು ಎಂದು ನಂಬಿಸಲಾಗಿದೆ.

ಮನುಷ್ಯ ಉನ್ನತಿಯನ್ನು ಸಾಧಿಸಲು ನೈತಿಕ ಪ್ರಜ್ಞೆಯನ್ನು ಬೆಳೆಸಿಕೊಳ್ಳಬೇಕು. ವಿವಿಧ ಬಗೆಯ ಪೂಜೆ, ಧೂಪ, ದೀಪಾರತಿಯಿಂದಲ್ಲ. ಕುಂತು ಮಂತ್ರ ಪಠಿಸಿ, ತಂತ್ರವಿದ್ಯೆಗಳನ್ನು ಕಲಿತು ಮಾಡುವುದು ನೇಮವಲ್ಲ. ಬೇರೆಯವರ ಹಣ, ಸ್ವತ್ತು ಹೊಡೆದುಕೊಂಡು ಬದುಕುವುದನ್ನು ಬಿಡಬೇಕು. ಪರಸ್ತ್ರೀ–ಪುರುಷರ ಸಂಗವ ಮಾಡಬಾರದು. ತನ್ನ ಇಷ್ಟಲಿಂಗವ ಬಿಟ್ಟು ಬೇರೆ ದೈವಕ್ಕೆ ತನ್ನ ನಿಷ್ಠೆಯನ್ನು, ಭಕ್ತಿಯನ್ನು ತೋರದಿರುವುದು ಶರಣ ಧರ್ಮದ ನಿಯಮ ಎಂದು ಸತ್ಯಕ್ಕ ಈ ವಚನದಲ್ಲಿ ತಿಳಿಸುತ್ತಾಳೆ.

**(ಡಾ. ನಂದೀಶ್ವರ ದಂಡೆ ಅವರ ವಚನ ಜೀವನ ಮಾರ್ಗ ಪುಸ್ತಕದಿಂದ)**

# ಎದೆ ನೆಲವ ಹದಗೊಳಿಸಿ...

ಭೌತಿಕ ಅಸ್ತಿಗೆ ವಾರಸುದಾರರು ನೂರು. ತುಂಡು ಭೂಮಿಗೆ ಬಡಿದಾಡಿಕೊಳ್ಳುವ ಸಂಬಂಧಗಳ ಜಂಜಾಟದಿಂದ ದೂರ ನಿಂತು ಯಾರ ಹಂಗಿರದ ಮಣ್ಣ ರೂಪಕ ಕೊಡುತ್ತಾರೆ **'ನಿನ್ನ ನುಣುಪಾದ ಕೈಗೆ ನನ್ನ ಕೈ ಎಣೆದು ಎದೆಯ ಮೇಲೆ ಮಲಗಿಬಿಡು ಇದು ಯಾರ ಹಂಗಿರದ ಮೆತ್ತನೆಯ ಮಣ್ಣು'**



ಪ್ರೇಮಿಗೆ ತನ್ನಿನಿಯನ/ಳ ಎದೆ ನೆಲವೆ ಭರವಸೆಯ ತಂಪನೀವ ಭೂಮಿ. ಅಲ್ಲಿ ತನ್ನ ಪ್ರೇಮವನ್ನು ಭದ್ರವಾಗಿ ಕಾಪಿಡುವ, ಹುಲುಸಾಗಿ ಬೆಳೆಯುವ–ಬೆಸೆದುಕೊಂಡು ಎನ್ನುವ ಸಾಲುಗಳು ಓದುಗನನ್ನು ಅವ್ಯಕ್ತ ಭಾವಲೋಕಕ್ಕೆ ಕರೆದೊಯ್ಯತ್ತವೆ. ಈ ಸಾಲುಗಳನ್ನು ಒಮ್ಮೆ ಕಣ್ಮುಚ್ಚಿ ಧ್ಯಾನಿಸಿದರೆ ಇನ್ನೊಂದು ವ್ಯಕ್ತ ರೂಪಕ ಬೆಸೆದುಕೊಳ್ಳುತ್ತದೆ. ಅದು ಭೂತಾಯಿ ಮತ್ತು ರೈತನದ್ದು. ಅವಳ ಮೃದು ಎದೆಯ ಮೇಲೆ ಎಲ್ಲವನ್ನು ಸಮರ್ಪಿಸಿ ಅವಳಿಗೆ ಶರಣಾಗಿ ಅವಳೆದೆಗೆ ಒರಗಿದ ರೈತನದ್ದು.

ಬದುಕಿನ ಅನುಭವಗಳ ಹೂರಣ ಕಾವ್ಯವಾದಾಗ, ಕವಿ ತಾನು ಬದುಕಲ್ಲಿ ಕಂಡುಂಡ ನೋವು, ನಲಿವುಗಳು ಕಾವ್ಯ ರೂಪ ಪಡೆಯುತ್ತವೆ. ಒಬ್ಬ ಕವಿ, ಲೇಖಕ ತನ್ನ ಸುತ್ತಲಿನ ಘಟನೆಗಳಿಗೆ ಕವಿಯಾದವನು ಪ್ರತಿಕ್ರಿಯಿಸದೇ ಇರಲಾರ. ತನ್ನ ಕಾಲದ ಸಾಮಾಜಿಕ ಆಗು ಹೋಗುಗಳಿಗೆ ಸ್ಪಂದಿಸದವನು, ಮತ್ತದನ್ನು ದಾಖಲಿಸದವನು ಅಂತಹ ಯಾವುದೇ ಘಟನೆಗಳಿಗೆ ತಾನು ಕೈಜೋಡಿಸಿದವನೆಂದು, ಮತ್ತು ಅಪರಾಧಿ ಎಂದೇ ಪರಿಗಣಿಸಲಾಗುವುದು. ಏಕೆಂದರೆ ಅವನಿಗೆ ನೈತಿಕ ಹೊಣೆಗಾರಿಕೆ ಇದೆ. ಸಾಮಾಜಿಕ ಜವಾಬ್ದಾರಿ ಇದೆ. ಅದರಿಂದ ನುಸುಳಿಕೊಳ್ಳುವಂತಿಲ್ಲ. ಅಂದಂದಿನ ವೃತ್ತಾಂತಗಳನ್ನು ದಾಖಲಿಸಬೇಕಾಗುತ್ತದೆ. ಅಂತಹ ಹೊಣೆಗಾರಿಕೆಯನ್ನು ಮರೆದವರು ಪಿ ಎಂ ಕೊಟ್ರಸ್ವಾಮಿಯವರು. ತಮ್ಮ ಬದುಕಿನ ಅನುಭವಕ್ಕೆ ಧಕ್ಕಿದ ಸಾರವನ್ನು ಚಂದದ ಉಪಮೆ, ರೂಪಕಗಳ ಮೂಲಕ ಕಾವ್ಯ ಹೆಣೆದಿದ್ದಾರೆ. ಅವರ ಕಾವ್ಯ ಕುಸುರಿಯಲ್ಲಿ ರೂಪುಗೊಂಡ ಪ್ರತಿಮೆಗಳೇ ಕಾವ್ಯ. ಇನ್ನು ಕೆಲವಕ್ಕೆ ಸೂಕ್ಷ್ಮ ಕುಸುರಿಯ ಅಗತ್ಯವಿತ್ತು ಎನ್ನಿಸದಿರದು. ಉದಾಹರಣೆಗೆ "ಹೋಗಲಿ ಕಳೆದುಕೊಂಡದ್ದಾದರು ಏನು? ಗಣಕನ ಮೂಲ ಕ್ರಿಯೆಗು ನಿಲುಕದಷ್ಟು" ಇಲ್ಲಿ ಗಣಕ ಎನ್ನುವ ಬದಲು ಹೊಸ ರೂಪಕ ಬಳಸಬಹುದಿತ್ತು. 'ಕಾಲ ಚಕ್ರಕೂ' ಅಥವಾ 'ಗಡಿಯಾರದ ಮುಳ್ಳಿಗೂ' ಎಂದಿದ್ದರೆ ತಟ್ಟನೆ ಮುಂದೆ ಓದಿಸಿಕೊಂಡು ಹೋಗುತ್ತಿತ್ತು ಅನ್ನಿಸಿತು. ಇಲ್ಲಿ ಕವಿ ತಾನು ಹುಡುಕುವ ಕ್ರಿಯೆಯಲ್ಲಿ ತೊಡಗಿ, ಕಳೆದುಕೊಂಡದ್ದು, ಮತ್ತು ಹುಡುಕುವುದು ಏನನ್ನು ಎನ್ನುವುದು ಮರೆತು ಹೋಗುವಷ್ಟು ಕಾಲ ಹುಡುಕುತ್ತಿದ್ದೇನೆ ಎನ್ನುವುದು ಕಾಲಕ್ಕೂ ನಿಲುಕದಷ್ಟು. ಗಮನಕ್ಕೆ ನಿಲುಕದಷ್ಟು ತೀವ್ರವಾಗಿ ಬದುಕು ಬದಲಾಗುತ್ತಿರುವುದಕ್ಕೆ ವಿಷಾದವಿದೆ. ನೋವಿದೆ. ಕಳೆದುಕೊಳ್ಳುವ ಅತಂತ್ರದಲ್ಲಿ ಕಳೆದು ಹೋಗುತ್ತಿರುವ ಹಳ್ಳಿಯ ಬದುಕಿನ ಅಸ್ಮಿತೆಯನ್ನು ನೆನೆಯುತ್ತಾರೆ.

"ಮಣ್ಣಲ್ಲಿ ಕಳೆದುದು ಸಿಕ್ಕೀತು,! ಗಾಳಿಯಲಿ ಕಳೆದುದು ಸಿಕ್ಕೀತೆ? ಹೀಗೆ ಹೇಳುವಲ್ಲಿ ನೆಲಮೂಲ ಸಂಸ್ಕೃತಿ ಪಶ್ಚಿಮದ ಗಾಳಿಯಲ್ಲಿ ಕಳೆದು ಹೋಗಿದೆ. ಪಾಶ್ಚಾತ್ಯ ಸಂಸ್ಕೃತಿಯ ಗಾಳಿ ಭಾರತೀಯ ಸಂಸ್ಕೃತಿಯನ್ನು ಕೊಚ್ಚಿಕೊಂಡು ಹೋಗಿದೆ ಎನ್ನುವ ವಿಷಾದದ ಜೊತೆ ಜೊತೆಗೆ ಅದನ್ನು ಹುಡುಕುವ ಸಂಕಲ್ಪವನ್ನು ಬಿಡುವುದಿಲ್ಲ.

ಅವ್ವ ಕಾಣುವ ಬೆಳಗಿನ ಕನಸಾದರೂ ಎಂಥಹದ್ದು "ಊರು ಕೇರಿ ಮನೆ, ಮನಗಳಲಿ ಮಹಾತ್ಮನ ರಾಮರಾಜ್ಯ! ರಾಜ ಬೀದಿಗಳಲಿ ಉಸಿರು ಉಸಿರಿನ ನಡುವೆ ಸಮರಸದ ಸೇತು" ಈ ಕಳೆದು ಹೋದುದನ್ನು ಪಡೆಯುವ ಸಂಕಲ್ಪದ ಜೊತೆಗೆ ಅವ್ವನ ಕನಸು ಇನ್ನಷ್ಟು ಜೊತೆಯಾಗುತ್ತದೆ ಆಕೆಯದ್ದು ರಾಮ ರಾಜ್ಯದ ಕನಸು ಬೆಳಗಿನ ಕನಸು ನನಸಾಗುವುದು ಎನ್ನುವ ಮಾತಿಗೆ ಇಂಬು ಕೊಡುವಂತೆ ಅವ್ವ ಜನರನ್ನು ಉಸಿರು ಉಸಿರಿನಲ್ಲೂ ಬೆಸೆಯುವ ಸೇತುವೆಯನ್ನೇ ಕನಸುತ್ತಾಳೆ. ಏಷ್ಟಾದರೂ ಆಕೆಯದ್ದು ಒಡಲ ವಾತ್ಸಲ್ಯದ ಪ್ರೇಮ.



ಕೂಡಲೇ ಯಾವುದೂ ಘಟಿಸುವುದಿಲ್ಲ ಎನ್ನುವ ಪ್ರಜ್ಞೆ ಮತ್ತು ಅದಕ್ಕಾಗಿ ಕಾಯುವ ತಾಳ್ಮೆ ಕವಿತೆಗಿದೆ. ಆದರೆ ಅದರ ಪ್ರಯತ್ನದಿಂದ ವಿಮುಖವಾಗುವುದಿಲ್ಲ. ಆದರೆ ಯುದ್ಧದ ಭಿಕರತೆಯಿಂದ ವಿಮುಖನಾಗಲು ಹಪಾಹಪಿಸುತ್ತಾನೆ ಕವಿ ಅದಕ್ಕಾಗಿ ಕರೆ ಕೊಡುತ್ತಾನೆ. "ತೆರೆದು ನೋಡಿಬಿಡು ದೇವರ ಗುಡಿಯ ಬೀದಿ ತುಂಬ ಜೋಳಿಗೆ ಹಿಡಿದು ನಿಂತವರ ಕಣ್ಣ ಕರಾಳತೆಯನ್ನು, ಆದರೂ ಸದಾ ಈ ಜಗದ ತುಂಬಾ ಅವ್ವನ ಮೊಲೆ ಹಾಲ ಶ್ವೇತ ವರ್ಣದ ಪರಿಮಳ ಘಮಿಸುತ್ತಿದೆ" ಯದ್ದವನ್ನು ನಿರಾಕರಿಸುತ್ತಾ "ಮಾನವ ಕುಲ ತಾನೊಂದೆ ವಲಂ' ಎನ್ನುವ ಉಕ್ತಿಯಂತೆ ನೆಲಕ್ಕಾಗಿ ಬಡಿದಾಡಿದಾಡಿಕೊಳ್ಳುವ ಎಲ್ಲರನ್ನು ಪೊರೆವ ತಾಯ ಎದೆ ಹಾಲಿನ ಬಣ್ಣದಲ್ಲೇನು ಕಲ್ಮಶವಿಲ್ಲ. ಅದು ಸದಾ ಶ್ವೇತ ವರ್ಣದಲ್ಲಿ ಶಾಂತಿ ಮಂತ್ರ ಸಾರುತ್ತದೆ. ಬಡಿದಾಡಿಕೊಂಡು ತಾಯ ಹೃದಯ ಘಾಸಿಗೊಳಿಸುವುದು ಬೇಡ ಎನ್ನುವ ಆಶಯ.




ಜಗವೆಲ್ಲಾ ಕಾವ್ಯವಾಗಬೇಕು ಎನ್ನುವುದು ಕವಿಯ ಆಶಯ. ಅದು ಈಡೇರಬೇಕಾದರೆ ವರುಣನ ಪ್ರಾರ್ಥಿಸುತ್ತಾರೆ. ಸುರಿದು ಬಿಡು ಮಳೆರಾಯ. ಜಗದ ಬರವ ನೀಗು ಎಂದು. ಅಂದುಕೊಂಡಂತೆ ಬದುಕಲ್ಲಿ ಏನೂ ನಡೆಯದು. ಬದುಕು ಅದೊಂದು ಪಯಣ ಸಾಗಿತ್ತಿರಬೇಕು. ಅಲ್ಲಲ್ಲಿ ಕೆಲವರು ಜೊತೆಯಾಗುವರು. ಜೊತೆ ಬಂದವರು ಪಯಣ ಮುಗಿಸುವರು – ಅವರವರ ತಾಣ ಬಂದಾಗ. ಹಾಗೆ ಪಯಣ ಮುಗಿಸಿದವರನ್ನು ನೆನೆಯುತ್ತಾ, ಹೊಸ ಪಯಣಿಗರ ಜೊತೆಗೆ ಮತ್ತೆ ಪಯಣ ಮುಂದುವರಿಸಲೇಬೇಕು. – ನಮ್ಮದು ಮುಗಿಯುವವರೆಗು. ಬದುಕಿನ ಈ ಯಾನವು ಒಮ್ಮೊಮ್ಮೆ ನಿರೀಕ್ಷಿತ ಶ್ರಾವಣ, ಮತ್ತೊಮ್ಮೆ ಏಕಾದಶಿ. ನಿರೀಕ್ಷೆಗಳು ಬದುಕನ್ನು ಜರ್ಜರಿತಗೊಳಿಸುತ್ತವೆ. ಬಂದ ಹಾಗೆ ಬದುಕುವುದು ಒಂದು ಕಲೆ. ಬದುಕಿನ ನೋವನ್ನೆಲ್ಲ ಸುಟ್ಟುಬಿಡು. ಆಸೆ ಅಮಿಷಗಳನ್ನು, ಅವ್ವನೆದೆಯ ನೋವನ್ನು ಸುಟ್ಟುಬಿಡು ಎನ್ನುತ್ತಾ ಮಾನವ ಪ್ರೇಮವನ್ನು ಚಿಗುರಿಸಿಬಿಡು ಎಂದು ಬೇಡುತ್ತಾರೆ. ಸಮಬಾಳು ಸಮಪಾಲು ಎನ್ನುತ್ತಾ ಶ್ರಮ ಸಂಸ್ಕೃತಿಯನ್ನು ಎತ್ತಿ ಹಿಡಿಯುತ್ತಾರೆ " ದಣಿದಾಗ ಗೂಡುಸೇರಿ ಕಣ್ಣು ಮುಚ್ಚಿ ಇರುಳು ಹೀರೋಣ, ಮತ್ತೆ ಮಕ್ಕಳಾಗಿ ಇಬ್ಬನಿ ನುಂಗಿದ ಹೂ ಬಿಸಿಲ ಕಾಯೋಣ" ಸುಖ ದುಃಖ ಗಳು ಹಗಲು ರಾತ್ರಿಯಂತೆ. "ನಿದ್ದೆಗೊಮ್ಮೆ ನಿತ್ಯ ಮರಣ ಎದ್ದ ಸಲ ನವೀನ ಜನನ" ಎನ್ನುವ ಕವಿ ವಾಣಿಯಂತೆ ಹಗಲು ದಣಿದ ಮನಕೆ ರಾತ್ರಿ ಸಾಂತ್ವಾನಿಸಿ ಮತ್ತೆ ಬೆಳಗಿನ ಇಬ್ಬನಿಯಲಿ ಹೊಸತನವ ಕಾಣೋಣ ಎನ್ನುವ ಭರವಸೆಯೊಂದಿಗೆ. ಒಂದೆಡೆ ಸಾಯಂಕಾಲ ಎನ್ನುವುದು ಬದುಕಿನ ಸಂಧ್ಯಾ ಕಾಲ. ಬೆಳಗು ಎನ್ನುವುದು ಬಾಲ್ಯ ಯೌವನವನ್ನು ಅನುಭವಿಸಿ ರಾತ್ರಿಗೆ ಬದುಕಿನ ಗೆಯ್ಮೆಯನ್ನು ನೆನೆದು ಸುಖಿಸುವ ಎನುತ್ತಾರೆ ಅದೆ ಬದುಕಿನ ತತ್ವ.

ಬದುಕಿನ ಬಂಡಿ ಮುನ್ನೆಡೆಯಲೇಬೇಕು ಎಂದಾಗ ನೊಗಕ್ಕೆ ಕತ್ತು ಕೊಟ್ಟವನು ಅದು ಹಿರಿಯನಾಗಲಿ ಕಿರಿಯನಾಗಲಿ ಎಳೆಯಲೇಬೇಕು. ಅದು ಮೇಲಿನವನು ಕೊಡುವ ನಿಶಾನೆ. ಅದನ್ನು ಮೀರುವಂತಿಲ್ಲ. ಬದುಕಿನ ದಾರಿ ಯಾವಾಗಲೂ ಸುಗಮವಿರುವುದಿಲ್ಲ. ಅದನ್ನು ಸಾವರಿಸಿಕೊಂಡು ನಡೆಯಬೇಕು

"ದಾರಿ ಯಾವುದಾದರೇನು
ಮುಳ್ಳು ಸಾವರಿಸಬೇಕು ತಾನೆ
ಮಣ್ಣೊಳಗಿನ ಅಕ್ಕಿಯನು
ಹಸನು ಮಾಡಿದಂತೆ ಬದುಕು
ಕುದಿವ ನೀರಲಿ ಬೆಂದು ಅನ್ನವಾಗಬೇಕು" ಬದುಕು ಎಲ್ಲರದು ಒಂದೇ ತೆರನಾದುದಲ್ಲ. ಅವರವರ ಬದುಕಿನ ದಾರಿಯನ್ನು ಅವರವರು ಅಣಿಗೊಳಿಸಿಕೊಳ್ಳಲೇಬೇಕು. ಅವರ ಹಸಿವಿಗೆ ಅವರೇ ಉಣ್ಣುವಂತೆ. ತನ್ನ ಪಾಲಿನ ಬದುಕು ತನ್ನ ಜವಾಬ್ದಾರಿ. ಕಷ್ಟ ಎನ್ನುವಂತಿಲ್ಲ. ಗುಡುಗು ಮಿಂಚುಗಳು ಸುಖದ ಮಳೆಗಾಗಿಯೇ. ಆದರೆ, ಬದುಕಿನ ಸಂಕಷ್ಟಗಳಿಗೆ ಅಂಜುವುದುಂಟೆ. ಬದುಕಿನ ಬಯಲನ್ನು ಹದಗೊಳಿಸಲು ಸುಖದ ಮಳೆ ಹುಯ್ದರೆ ಎದೆಯ ಮಣ್ಣು ಹದವಾದೀತು. ಭವದ ಸಂಗಾತಿಗೆ ಎದೆ ನೆಲದ ಕಂಪನು ಕಾಪಿಟ್ಟು ಕಾಯುವ ಅಮರ ಪ್ರೇಮಿ ಅಗಲು. ಬದುಕಿನ ಪ್ರೀತಿಗೆ ಪ್ರಕೃತಿಯನ್ನೇ ಪುರಾವೆಯಾಗಿಸಿಕೊಳ್ಳುತ್ತಾನೆ ಕವಿ. ವ್ಯಷ್ಟಿ ಪ್ರಜ್ಞೆ ಸಮಷ್ಟಿಯೆಡೆಗೆ ಸಾಗಿ. ಸಾಮಾಜಿಕ ಜವಾಬ್ದಾರಿ ಮರೆಯುವುದನ್ನು ಕಾಣುತ್ತೇವೆ. ನೋವು ಯಾರಿಗಿಲ್ಲ ಹುಡುಕುತ್ತಾ ಹೋದರೆ ಸಿಗುವುದು ಮತ್ತದೇ ನೊಂದ ಅನಾಥ ಪ್ರೀತಿ. ನಾನು ಎಂಬ ಆಹಮ್ಮಿನಿಂದ ದೂರ ಸರಿದವರಿಗೆ ಪ್ರೀತಿ ದಕ್ಕುವುದಾದರೂ ಹೇಗೆ. ಎಲ್ಲರೊಳೊಂದಾಗಬೇಕು. ಜಗದ ಪ್ರೀತಿಗೆ ಶರಣಾಗಬೇಕು. ಪ್ರೆಮವನ್ನು ನಿರೀಕ್ಷಿಸುವವರು ದ್ವೇಷವನ್ನು ಬಿತ್ತಿದರೆ. ಪ್ರಿತಿ ಬೆಳೆ ಬಂದೀತೆ. ಪ್ರೀತಿ ಪ್ರಿತಿಯನ್ನು ಸೃಜಿಸುತ್ತದೆ. ಜಗಕೆ ಬಿತ್ತಬೇಕಿರುವುದು ಪ್ರೀತಿಯನ್ನು. ಆಗ ಅನಾಥ ಭಾವ ಅಳಿಯುವುದು.

ಜಗದ ಕುಟುಂಬಕ್ಕೆ ಅಪ್ಪ, ಅವ್ವ ರೂಪಕವಾಗುತ್ತಾರೆ. ಸಮಷ್ಟಿಯ ಹಿತದಲ್ಲಿ ತನ್ನ ಹಿತವೂ ಇದೆ ಎಂದರೆ ದೂರವಾದೀತು. ಕುಟುಂಬದ ಹಿತದಲ್ಲಿ ತನ್ನ ಸುಖವಿದೆ ಎಂದು ಬಾಳುವ, ಬಾಳಗೊಡುವ ಮನಸ್ಥಿತಿಗೆ ನಾವು ಅಣಿಯಾಗಬೇಕಿದೆ. ಕಳೆದುಕೊಂಡುದರ ಅರಿವಿದ್ದವರಿಗೆ ಪಡೆಯುವ ಹಂಬಲ ಇರುತ್ತದೆ. ನಾವು ಜಾಣರಾಗಲಿಲ್ಲ ಎನ್ನುವ ನೋವು ಅಗಾಧವಿದೆ. ಕಳೆದುಕೊಂಡುದರ ಅರಿವಿದೆ. ಅದಕಾಗಿ ಕಳೆದುಕೊಂಡ ಅಪ್ಪನ ನಿರೀಕ್ಷೆಯು ಅದ್ಭುತ ಕಾವ್ಯ ಪ್ರತಿಮೆ. ಪ್ರೀತಿ, ಸಹಬಾಳ್ವೆ ಕ್ಷಮದಾನ ನೀಡಿದ ಬುದ್ಧ ಬಸವ ಗಾಂಧಿ ಮತ್ತೆ ಬರುವ ನಿರೀಕ್ಷೆ ಸಹಜವಾಗಿದೆ. ಅದರೂ ಎದೆ ನೆಲವ ಹದಗೊಳಿಸಿ ಹೋಗಿದ್ದಾರೆ ಪ್ರೀತಿ ಬೆಳೆಯ ಬೆಳೆಯಲು.

**- ಭಾರತಿ ಅಶೋಕ್, ಹೊಸಪೇಟೆ**

## ಡಿ.14 ಗುತ್ತಿಗೆದಾರರ ಸಂಘದಿಂದ ಒಂದು ದಿನದ ಮುಷ್ಕರ

**ಹಂಪಿ ಟೈಮ್ಸ್ ಬೆಳಗಾವಿ:**



ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯ ಗುತ್ತಿಗೆದಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯುವ ದೃಷ್ಟಿಯಿಂದ ಗುರುವಾರ ದಿನಾಂಕ ಡಿ.14 ರಂದು ಸುವರ್ಣ ಗಾರ್ಡನ್ ಟೆಂಟ್ ನಂ 3 ರಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆ ವರೆಗೆ ಒಂದು ದಿನದ ಮುಷ್ಕರ ಹಮ್ಮಿಕೊಳ್ಳಲಾಗಿದೆ.

ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಡಿ ಕೆಂಪಣ್ಣ ನೇತೃತ್ವದಲ್ಲಿ ಮುಷ್ಕರ ನಡೆಯಲಿದೆ. ಈ ಮುಷ್ಕರದಲ್ಲಿ ರಾಜ್ಯ ಸಂಘದ ಪದಾಧಿಕಾರಿಗಳು ಉಪಸ್ಥಿತರಿರುವರು. ಕಾರಣ ಗುತ್ತಿಗೆದಾರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಮುಷ್ಕರದಲ್ಲಿ ಭಾಗವಹಿಸಿ ಗುತ್ತಿಗೆದಾರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ದೃಷ್ಟಿಯಿಂದ ಮುಷ್ಕರವನ್ನು ಯಶಸ್ವಿಗೊಳಿಸ ಬೇಕೆಂದು ಹಿರಿಯ ಜಿಲ್ಲಾ ಗೌರವಧ್ಯಕ್ಷ ಬಸವರಾಜ ಮಟಗಾರ ಪ್ರಕಟಣೆಯಲ್ಲಿ ಕೋರಿದ್ದಾರೆ.

### ಮಕ್ಕಳು ಅರಸರಾಗಬೇಕೆ?

**ಓದಲು ಸಮಯವಿಲ್ಲವೆಂದು ಪತ್ರಿಕೆಯನ್ನು ಕೈ ಬಿಡಬಾರದು, ಕನ್ನಡ ಪತ್ರಿಕೆಯೊಂದು ಕೈಯಲ್ಲಿಡಿದರೆ, ಹಿರಿಯರನ್ನು ಅನುಸರಿಸುವ ಮಕ್ಕಳು ಮೊಬೈಲ್ ಬಿಟ್ಟು ಅಕ್ಷರ ದಾಸರಾಗುತ್ತಾರೆ. ಅಕ್ಷರ ದಾಸರಾದರೆ ಅರಸರು ಆಗಬಲ್ಲರಲ್ಲವೇ ?**

### ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

ಸಂಪಾದಕರು

**ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**

ಇ–ಮೇಲ್:hampitimes@gmail.com

## ಪ್ರಶೋತ್ತರ ಕಲಾಪದಲ್ಲಿ ಶಾಸಕರ ಪ್ರಶ್ನೆಗಳಿಗೆ ಉತ್ತರಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ

## ಪ್ರೇಮಿಗಳಿಗೆ ರಕ್ಷಣೆ

**ಹಂಪಿ ಟೈಮ್ಸ್ ಸುವರ್ಣಸೌಧ ಬೆಳಗಾವಿ**

ಬೆಳಗಾವಿ ತಾಲ್ಲೂಕಿನ ಹೊಸ ವಂಟಮೂರಿ ಗ್ರಾಮದಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿ ಥಳಿಸಿದ ಪ್ರಕರಣದಲ್ಲಿ ಈಗಾಗಲೇ 7 ಜನರನ್ನು ಬಂಧಿಸಲಾಗಿದೆ. ಪ್ರೀತಿಸಿ ಗ್ರಾಮ ಬಿಟ್ಟು ಹೋದ ಪ್ರೇಮಿಗಳನ್ನು ಹುಡುಕಿ ಸರ್ಕಾರದಿಂದ ಸೂಕ್ತ ರಕ್ಷಣೆ ಕಲ್ಪಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಮಂಗಳವಾರ ವಿಧಾನ ಸಭೆಯ ಶೂನ್ಯವೇಳೆಯಲ್ಲಿ ಪ್ರಕರಣದ ಕುರಿತು ಜರುಗಿದ ಚರ್ಚೆಯಲ್ಲಿ ಅವರು ಮಾತನಾಡಿದರು.



ನಾಗರಿಕ ಸಮಾಜ ತಲೆತಗ್ಗಿಸುವ ಘಟನೆ ಇದಾಗಿದೆ. ಗ್ರಾಮದ ಅಶೋಕ್ ಗಡ್ಡಕರಿ ಹಾಗೂ ಪ್ರಿಯಾಂಕ ಪರಸ್ಪರ ಪ್ರೀತಿಸುತ್ತಿದ್ದರು. ಈ ಪ್ರೀತಿಗೆ ಹುಡುಗಿಯ ಮನೆಯವರು ವಿರೋಧಿಸಿದ್ದರಿಂದ ಪ್ರೇಮಿಗಳು ಗ್ರಾಮ ಬಿಟ್ಟು ಹೋಗಿದ್ದಾರೆ. ಈ ವಿಚಾರ ತಿಳಿದ ಹುಡುಗಿಯ ಸಂಬಂಧಿಕರು, ಹುಡುಗನ ಮನೆಗೆ ಆಗಮಿಸಿ, ತಾಯಿ ಹಾಗೂ ವಯಸ್ಸಾದ ಅಜ್ಜಿಯ ಮೇಲೆ ದೌರ್ಜನ್ಯ ಎಸಗಿದ್ದಾರೆ. ಅಷ್ಟಕ್ಕೆ ಸುಮ್ಮನಾಗದೆ 55 ವರ್ಷದ ಹುಡುಗನ ತಾಯಿಯನ್ನು ವಿವಸ್ತ್ರಗೊಳಿಸಿ ಥಳಿಸಿದ್ದಾರೆ. ಘಟನೆ ಬಗ್ಗೆ ತಿಳಿದ ತಕ್ಷಣ ಪೊಲೀಸರು ಗ್ರಾಮಕ್ಕೆ ತೆರಳಿ ಮಹಿಳೆಯನ್ನು ರಕ್ಷಿಸಿ, ಆಸ್ಪತ್ರೆ ದಾಖಲಿಸಿದ್ದಾರೆ. ಚಿಕಿತ್ಸೆ ಪಡೆಯುತ್ತಿರುವ ಸಂತ್ರಸ್ತೆ ಭೇಟಿ ಮಾಡಿ ಧೈರ್ಯ ಹೇಳಿದ್ದೇನೆ. ಗ್ರಾಮಕ್ಕೂ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದ್ದೇನೆ. ಸದ್ಯ ಪರಿಸ್ಥಿತಿ ಶಾಂತವಾಗಿದೆ. ಘಟನೆಯ ಬಗ್ಗೆ ತಿಳಿದು ಪ್ರೇಮಿಗಳು ಆತಂಕಕ್ಕೆ ಒಳಗಾಗಿ, ಅನಾಹುತ ಮಾಡಿಕೊಳ್ಳುವ ಮುನ್ನವೇ ಅವರನ್ನು ಪತ್ತೆ ಹಚ್ಚಿ ರಕ್ಷಣೆ ನೀಡುವುದಾಗಿ ಹೇಳಿದರು.

ಸಮಾಜದಲ್ಲಿ ಇಂದಿಗೂ ಪ್ರೀತಿಸಿ ಮದುವೆ ಆಗುವುದಕ್ಕೆ ವಿರೋಧ ಕಂಡುಬರುತ್ತಿದೆ. ಕೆಲವು ಪ್ರಕರಣಗಳಲ್ಲಿ ಪೋಷಕರು ಒಪ್ಪಿ ಮದುವೆ ಮಾಡಿಸುತ್ತಾರೆ. ಆದರೂ ಬಹುತೇಕ ಕಡೆ ವಿರೋಧವೇ ಹೆಚ್ಚು. ಮರ್ಯಾದೆ ಹತ್ಯೆ ಅಂತಹ ಪ್ರಕರಣಗಳು ಸಹ ಇವೆ. ಪ್ರೀತಿಸಿ ಮದುವೆ ಆಗುವುದಕ್ಕೆ ಸಮಾಜ ಒಪ್ಪಬೇಕು. ಆಗ ಮಾತ್ರ ಇಂತಹ ಪ್ರಕರಣಗಳು ಕಡಿಮೆ ಯಾಗುತ್ತವೆ. ಇಂತಹ ವಿಚಾರದಲ್ಲಿ ಕಾನೂನಿಗಿಂತ ಸಮಾಜದಲ್ಲಿ ಬದಲಾವಣೆ ಮೂಡುವುದು ಅಗತ್ಯವಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಅಭಿಪ್ರಾಯಪಟ್ಟರು.

ಶಾಸಕ ಸುನೀಲ್‌ಕುಮಾರ್ ಮಾತನಾಡಿ, ಸಂತ್ರಸ್ತರಿಗೆ ಸರ್ಕಾರ ರಕ್ಷಣೆ ನೀಡಬೇಕು. ಸಂಪೂರ್ಣ ಚಿಕಿತ್ಸಾ ವೆಚ್ಚವನ್ನು ಭರಿಸಬೇಕು. ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದರು.

ಶಾಸಕಿ ಶಶಿಕಲಾ ಜೊಲ್ಲೆ ಮಾತನಾಡಿ ಆರೋಪಿಗಳಿಗೆ ನ್ಯಾಯಲಯದಲ್ಲಿ ಜಾಮೀನು ಸಿಗದಂತೆ ಕಠಿಣ ಕಾನೂನುಗಳ ಅಡಿ ಪ್ರಕರಣ ದಾಖಲಿಸುವಂತೆ ಒತ್ತಾಯಿಸಿದರು. ಶಾಸಕ ಅಶೋಕ್ ಪಟ್ಟಣ ಸಹ ಪ್ರಕರಣವನ್ನು ಖಂಡಿಸಿದರು.

## ಶೇ.80 ಪೊಲೀಸ್ ಸಿಬ್ಬಂದಿಗೆ ವಸತಿ ಗೃಹ

**ಹಂಪಿ ಟೈಮ್ಸ್ ಸುವರ್ಣಸೌಧ ಬೆಳಗಾವಿ**

2025ರ ವೇಳೆಗೆ ರಾಜ್ಯದ ಶೇ.80 ರಷ್ಟು ಪೊಲೀಸ್ ಸಿಬ್ಬಂದಿಗೆ ವಸತಿ ಗೃಹ ಕಲ್ಪಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು. ಮಂಗಳವಾರ ವಿಧಾನ ಸಭೆಯ ಪ್ರಶೋತ್ತರ ಕಲಾಪದಲ್ಲಿ ಶಾಸಕರ ಪ್ರಶ್ನೆಗಳಿಗೆ ಉತ್ತರಿಸಿ ಅವರು ಮಾತನಾಡಿದರು.

ಈ ಹಿಂದೆ ಗೃಹ ಸಚಿವನಾಗಿದ್ದ ವೇಳೆ 2020ರ ವೇಳೆಗೆ ರಾಜ್ಯದಲ್ಲಿ 10 ರಿಂದ 15 ಸಾವಿರ ಪೊಲೀಸ್ ವಸತಿ ಗೃಹಗಳನ್ನು ನಿರ್ಮಿಸಲು ಯೋಜನೆ ರೂಪಿಸಿದ್ದೆ. ನಂತರ ಬಂದ ಸರ್ಕಾರವು ಯೋಜನೆಯನ್ನು ಮುಂದುವರಿಸಿದೆ. ಗ್ರಾಮೀಣ ಹಾಗೂ ಅವಶ್ಯಕತೆ ಇರುವ ಕಡೆ ವಸತಿ ಗೃಹಗಳನ್ನು ನಿರ್ಮಿಸಲಾಗುವುದು. ಈಗಾಗಲೇ ಶೇ.40 ರಷ್ಟು ಸಿಬ್ಬಂದಿಗೆ ವಸತಿ ಗೃಹಗಳನ್ನು ನಿರ್ಮಿಸಲಾಗಿದೆ ಎಂದರು.

ಹೊನ್ನಾಳಿ ತಾಲ್ಲೂಕು ನ್ಯಾಮಿತಿಯಲ್ಲಿ 12 ಹೊಸ ವಸತಿ ಗೃಹಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಪೊಲೀಸ್ ಠಾಣೆಗೆ 2.26 ಎಕರೆ ಜಮೀನು ನೀಡಿದ್ದ ದಿವಂಗತ ಹೆಚ್.ಬಸವರಾಜಪ್ಪನವರ ಪತ್ನಿ ಹಾಗೂ ಮಕ್ಕಳು ರೂ.45 ಲಕ್ಷ ಹೆಚ್ಚಿನ ಪರಿಹಾರ ಕೋರಿ ಉಚ್ಚ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಈಗಾಗಲೇ ಅವರಿಗೆ ರೂ.53.92 ಲಕ್ಷ ರೂಪಾಯಿ ಪರಿಹಾರ ನೀಡಲಾಗಿದೆ. ನ್ಯಾಯಾಲಯದ ಆದೇಶ ಬಂದ ಕೂಡಲೇ ವಸತಿ ಗೃಹಗಳ ನಿರ್ಮಾಣ ಕಾರ್ಯ ಆರಂಭಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಶಾಸಕ ಶಾಂತನಗೌಡ ಡಿ.ಜಿ. ಚುಕ್ಕೆ ಗುರುತನ ಪ್ರಶ್ನೆ ಉತ್ತರಿಸಿದರು.

ಆಯವ್ಯಯದಲ್ಲಿ ಹೊಸ ಅಗ್ನಿಶಾಮಕ ಠಾಣೆಗೆ ಪ್ರಸ್ತಾವನೆ : ರಾಜ್ಯದ ಹಲವು ತಾಲ್ಲೂಕು ಕೇಂದ್ರಗಳಲ್ಲಿ ಹೊಸ ಅಗ್ನಿಶಾಮಕ ಠಾಣೆ ನಿರ್ಮಿಸಲು ಶಾಸಕರಿಂದ ಕಡೆಯಿಂದ ಮನವಿಗಳು ಬಂದಿವೆ. ಈ ಮನವಿಗಳನ್ನು ಪರಿಗಣಿಸಿ ಮುಂದಿನ ಆಯವ್ಯಯದಲ್ಲಿ ಹೊಸ ಅಗ್ನಿಶಾಮಕ ಠಾಣೆ ನಿರ್ಮಿಸಲು ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸುವುದಾಗಿ ಡಾ.ಜಿ.ಪರಮೇಶ್ವ ಹೇಳಿದರು.

ಸದ್ಯ ನಿಯಮಗಳ ಅನುಸಾರ ನಗರ ಪ್ರದೇಶದಲ್ಲಿ 10 ಚದುರ ಕಿ.ಮೀ.ಗೆ ಒಂದು ಹಾಗೂ ಗ್ರಾಮೀಣ ಪ್ರದೇಶದಲ್ಲಿ 50 ಚದುರ ಕಿ.ಮೀ.ಗೆ ಒಂದು ಅಗ್ನಿಶಾಮಕ ಠಾಣೆ ಕಾರ್ಯ ನಿರ್ವಹಿಸುತ್ತಿವೆ. ಅಗ್ನಿ ಕರೆಗಳನ್ನು ಆಧರಿಸಿ ಕಾರ್ಯಚರಣೆ ನಡೆಸಲಾಗುತ್ತಿದೆ. ಮೂಡಲಿಗೆ ತಾಲ್ಲೂಕಿನ ವ್ಯಾಪ್ತಿಯಲ್ಲಿ ವಾರ್ಷಿಕವಾಗಿ ಸರಾಸರಿ 8 ರಿಂದ 10 ಅಗ್ನಿ ಕರೆಗಳು ಸ್ವೀಕೃತಗೊಳ್ಳುತ್ತಿವೆ. ಇವುಗಳಿಗೆ ಸ್ಪಂದಿಸಿ ಗೋಕಾಕ್ ಅಗ್ನಿಶಾಮಕ ಠಾಣೆಯಿಂದ ಬೆಂಕಿ ಅವಘಡಗಳನ್ನು ನಿರ್ವಹಿಸಲಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಶಾಸಕ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ ಚುಕ್ಕೆ ಗುರುತಿನ ಪ್ರಶ್ನೆ ಉತ್ತರಿಸಿದರು.

ಮೂಡಲಗಿಯಲ್ಲಿ ಕಳೆದ ವರ್ಷ 2 ಶಾಪ್‌ಗಳಿಗೆ ಬೆಂಕಿ ಬಿದ್ದು ಕೋಟ್ಯಾಂತರ ರೂಪಾಯಿಗಳ ನಷ್ಟ ಸಂಭವಿಸಿದೆ. ಗೋಕಾಕ್ ದೂರಇರುವುದರಿಂದಮೂಡಲಗಿಯಲ್ಲಿಯೇ ಅಗ್ನಿಶಾಮಕ ಠಾಣೆ ನಿರ್ಮಿಸವುದು ಅಗತ್ಯವಿದೆ. ಈಗಾಗಲೇ 1.20 ಎಕರೆ ಜಮೀನು ಸಹ ಗುರುತಿಸಿ, ಗೃಹ ಇಲಾಖೆ ನೀಡಲಾಗಿದೆ. ಸರ್ಕಾರ ಆದ್ಯತೆ ಮೇರೆಗೆ ಕ್ರಮಕೈಗೊಳ್ಳಬೇಕು ಎಂದು ಶಾಸಕ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ ಕೋರಿದರು.

## ಗೃಹ ರಕ್ಷಕರ ಕರ್ತವ್ಯ ಭತ್ಯೆ ಪರಿಷ್ಕರಣೆ

**ಹಂಪಿ ಟೈಮ್ಸ್ ಸುವರ್ಣಸೌಧ ಬೆಳಗಾವಿ**

ಗೃಹ ರಕ್ಷಕರಿಗೆ ಬೇರೆ ರಾಜ್ಯಗಳಲ್ಲಿ ನೀಡುತ್ತಿರುವ ಭತ್ಯೆಯನ್ನು ಅವಲೋಕಿಸಿ ಶೀಘ್ರವೇ ಕರ್ತವ್ಯ ಭತ್ಯೆಯನ್ನು ಪರಿಷ್ಕರಣೆ ಮಾಡುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಮಂಗಳವಾರ ವಿಧಾನ ಸಭೆ ಪ್ರಶ್ನೋತ್ತರ ವೇಳೆಯಲ್ಲಿ ಶಾಸಕಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು. 21,327 ಪುರಷ ಹಾಗೂ 4555 ಮಹಿಳೆ ಸೇರಿ ಒಟ್ಟು 25,882 ಗೃಹರಕ್ಷರು ರಾಜ್ಯದಲ್ಲಿ ಕಾರ್ಯ ನಿರ್ವಿಹಿಸುತ್ತಿದ್ದಾರೆ. ಸರ್ಕಾರ ಆದೇಶದಂತೆ ಪೊಲೀಸ್ ಇಲಾಖೆಯ ಬಂದೋಬಸ್ತ್, ಕಾನೂನು ಸುವ್ಯವಸ್ಥೆ, ಸಂಚಾರ ನಿಯಂತ್ರಣ ಹಾಗೂ ಠಾಣೆ ಕಾರ್ಯಗಳಲ್ಲಿ ಕರ್ತವ್ಯ ನಿರ್ವಹಿಸುವ ಗೃಹರಕ್ಷಕರಿಗೆ ರೂ.750, ಬೇರೆ ಇಲಾಖೆಗಳಲ್ಲಿ ರೂ.600 ಹಾಗೂ ಪಹರೆ ಕೆಲಸಕ್ಕೆ ಬೆಂಗಳೂರು ನಗರದಲ್ಲಿ ರೂ.455 ಹಾಗೂ ಇತರೆ ಸ್ಥಳದಲ್ಲಿ ರೂ.380 ಭತ್ಯೆ ನೀಡಲಾಗುತ್ತಿದೆ. ಈ ವ್ಯತ್ಯಾಸವನ್ನು ಸರಿ ಪಡಿಸಿ ರೂ.750 ದಿನಭತ್ಯೆ ನೀಡಲು ಸರ್ಕಾರ ಮಟ್ಟದಲ್ಲಿ ಚಿಂತಿಸಲಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು.

ಗೃಹರಕ್ಷಕರಲ್ಲಿ ಯಾವುದೇ ತಾರತಮ್ಯ ಇಲ್ಲದೆ ಕರ್ತವ್ಯಕ್ಕೆ ನಿಯೋಜಿಸಬೇಕು. ಗೃಹರಕ್ಷಕರಿಗೆ ಆರೋಗ್ಯ ಭದ್ರತೆ, ಪ್ರಯಾಣ ಭತ್ಯೆಗಳನ್ನು ನೀಡಬೇಕು ಎಂದು ಶಾಸಕಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ ಒತ್ತಾಯಿಸಿದರು

**ಕವಿ ಮನಸು**

## ನಗು ನಗುತಾ ನಲಿ ನಲಿ

ಅವಶ್ಯಕತೆಗೆ ಮೀರಿ ವೇಗವಾಗಿ
ಓಡುವ ಮಾನವತನ.
ಅಷ್ಟೇ ವೇಗವಾಗಿ ಖಿನ್ನತೆಗೆ
ಜಾರುತ್ತಿರುವ ಆತನ ಮನ.
ಕೆಟ್ಟ ಆಲೋಚನೆಯ ಮಾತಿಗೆ
ಕಿವಿಕೊಡುವ ಮುನ್ನ.
ಕೈಗೆ ಒಂದು ಒಳ್ಳೆಯ ಪುಸ್ತಕ
ಎತ್ತಿಕೊಳ್ಳುವ ಪ್ರಯತ್ನ ಮಾಡೋಣ.
ನೀ ಯಾರದಾದ್ರು ಮಾತು ಕೇಳ
ಬಯಸಿದರೆ ಅದು ಪುಸ್ತಕವಾಗಲಿ.
ನಿನ್ನ ಮಾತು ಬೇರೆಯವರಿಗೆ ಹೇಳ
ಬಯಸಿದರೆ ಅದು ಬಿಳಿಯ
ಹಾಳೆಯಾಗಲಿ.
ಈ ಭೂಮಿಯ ಮೇಲೆ ಬೇರೆಯೇ
ಪ್ರಪಂಚ ಕಾಣಲು ಬಯಸಿದ್ದರೆ
ಕೈಯಲೊಂದು ಪುಸ್ತಕ ಹಿಡಿ.
ಭೂಮಿ ಎಷ್ಟೇ ವೇಗವಾಗಿ ಚಲಿಸಲಿ
ನೀ ಅನುದಿನವೂ ಬದುಕುವ ಕಲೆಯನ್ನು
ಕಲಿ.
ನಗು ನಗುತಾ ನಲಿ ನಲಿ.

**– ಮಂಜುಶ್ರೀ ಮುರಳೀಧರ್.**
ತೋರಣಗಲ್ಲು, ಬಳ್ಳಾರಿ.

ಹಂಪಿ ಟೈಮ್ಸ್ ಚಾನಲ್
ವಿಜಯನಗರದ ಹೆಮ್ಮೆ
FREE!
hampitimes epaper
save your mobile space !
SCAN QR CODE TO JOIN FOLLOW
HAMPI TIMES
whatsapp channel

PLACE YOUR ADVT.
HOUSE RENT / SALE / LEASE, CHANGE OF NAME, OBITUARY, Public Notice & EVENT COVERAGE
Contact
9448633038
Near Valmiki Circle, HOSAPETE-583201
Email:hampitimes@gmail.com

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಸ್ಥಳೀಯ ಸುದ್ದಿಗಳಿಗಾಗಿ ಭೇಟಿ ನೀಡಿ
www.hampitimes.com
epaper.hampitimes.com

# ನಿವೇಶನದ ಮಾಲೀಕತ್ವ ಖಾತ್ರಿಪಡಿಸಿಕೊಳ್ಳಿ

### ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿಕೆ । ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ



**ಹಂಪಿ ಟೈಮ್ಸ್ ಕೊಪ್ಪಳ**
ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆ ಕಟ್ಟಡ ನಿರ್ಮಾಣ, ಕ್ರೀಡಾಂಗಣ ನಿರ್ಮಾಣ ಸೇರಿದಂತೆ ವಿವಿಧ ಉದ್ದೇಶಗಳಿಗೆ ಖರೀದಿಸಲಾದ ಅಥವಾ ಸ್ವಾಧೀನ ಪಡಿಸಿಕೊಳ್ಳಲಾದ ಖಾಸಗಿ ಜಮೀನು ಅಥವಾ ನಿವೇಶನಗಳ ಮಾಲೀಕತ್ವವನ್ನು ಸಂಬಂಧಿಸಿದ ಇಲಾಖೆಗಳು ಪಹಣಿ ಮುಖಾಂತರ ಖಾತ್ರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಸೋಮವಾರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಖಾಸಗಿ ಜಮೀನು ಅಥವಾ ನಿವೇಶನವನ್ನು ಖರೀದಿಸಿದ ಮೇಲೆ ಕೂಡಲೇ ಅದರ ಮಾಲೀಕತ್ವವನ್ನು ಬದಲಾಯಿಸಿ ಸಂಬಂಧಿಸಿದ ಇಲಾಖೆ ಹೆಸರಲ್ಲಿ ಪಹಣಿ ಪಡೆಯಬೇಕು. ಇಲ್ಲದಿದ್ದಲ್ಲಿ ಖಾಸಗಿ ವ್ಯಕ್ತಿಗಳು ಹಾಗೂ ಸರ್ಕಾರದ ನಡುವೆ ಅನಗತ್ಯ ಗೊಂದಲ ಉಂಟಾಗುವುದಲ್ಲದೆ, ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತದೆ. ಆದ್ದರಿಂದ ಇನ್ನುಮುಂದೆ ಯಾವುದೇ ಇಲಾಖೆಯಿಂದ ಖರೀದಿಸಿದ ಅಥವಾ ಸ್ವಾಧೀನ ಪಡಿಸಿಕೊಂಡ ಖಾಸಗಿ ಜಮೀನು ಅಥವಾ ನಿವೇಶನವನ್ನು ವಿಳಂಬವಿಲ್ಲದೆ ಮಾಲೀಕತ್ವ ಬದಲಾವಣೆಗೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಅಗತ್ಯವಿರುವ ಪದವಿ ಪೂರ್ವ(ಪಿಯು) ಕಾಲೇಜುಗಳ ಪಟ್ಟಿಯನ್ನು ಹೋಬಳಿವಾರು ಪಟ್ಟಿ ಮಾಡಿ ಜಿಲ್ಲಾ ಪಂಚಾಯತಿಯ ಸಿಇಒ ಅವರಿಗೆ ತಿಳಿಸಬೇಕು. ಪಿಯು ಕಾಲೇಜು ಆರಂಭಿಸುವ ಗ್ರಾಮ ಅಥವಾ ನಗರದಲ್ಲಿ ಜನಸಂಖ್ಯೆ ಆಧಾರದ ಮೇಲೆ ಕಾಲೇಜು ಆರಂಭಕ್ಕೆ ಕ್ರಮ ಕೈಗೊಳ್ಳಬೇಕು. ಒಟ್ಟು ಬೇಡಿಕೆಯ ಪಟ್ಟಿಯನ್ನು ಸಲ್ಲಿಸಿದಲ್ಲಿ ನಿವೇಶನ ಖರೀದಿ, ಕಟ್ಟಡ ಕಾಮಗಾರಿ ಆರಂಭಕ್ಕೆ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಈ ಬಗ್ಗೆ ಖುದ್ದು ಸ್ಥಳಕ್ಕೆ ಭೇಟಿ ನೀಡಿ, ಬೇಡಿಕೆಯನುಸಾರ ಪಟ್ಟಿ ಸಿದ್ದಪಡಿಸಿ ಎಂದು ಪಿಯು ಉಪನಿರ್ದೇಶಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಅದರಂತೆ ಜಿಲ್ಲೆಯ ಎಲ್ಲ ಇಲಾಖೆಗಳು ತಮಗೆ ಅಗತ್ಯವಿರುವ ನಿವೇಶನ, ಕಟ್ಟಡ ಕಾಮಗಾರಿ ಮುಂತಾದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಯಾವುದೇ ಸಮಸ್ಯೆ ಉಂಟಾದಲ್ಲಿ ಸಂಬಂಧಿಸಿದ ಮೇಲಾಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಇತ್ಯರ್ಥಪಡಿಸಿಕೊಂಡು ಕಾಮಗಾರಿ ಆರಂಭಿಸಬೇಕು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ರೈಲ್ವೇ ಕಾಮಗಾರಿಗಳಲ್ಲಿ ಭೂಸ್ವಾಧೀನಕ್ಕೊಳಗಾದ ರೈತರಿಗೆ ತೊಂದರೆಯಾಗದಂತೆ ಅವರಿಗೆ ಪರಿಹಾರ ಲಭ್ಯವಾಗಿರುವ ಕುರಿತು ಖಚಿತಪಡಿಸಿಕೊಂಡು, ಕಾಮಗಾರಿಗಳಿಂದ ಸಾರ್ವಜನಿಕರಿಗೆ ಹಾಗೂ ಸರ್ಕಾರದ ಅಬಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗದಂತೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ತಿಳಿಸಿದರು.

ಕಚೇರಿ ಕಾರ್ಯವನ್ನು ಇ-ಕಚೇರಿಯಲ್ಲಿ ಖಡತ ನಿರ್ವಹಣೆ ಮಾಡುವ ಮೂಲಕ ಅನುಷ್ಠಾನಗೊಳಿಸುವುದನ್ನು ಕಡ್ಡಾಯ ಮಾಡಲಾಗಿದೆ. ಆದಾಗ್ಯೂ ಅನೇಕ ಇಲಾಖೆಗಳು ಇನ್ನೂ ಮ್ಯಾನುವಲ್ ರೂಪದಲ್ಲಿ ಖಡತಗಳನ್ನು ಸಹಿಗೆ ಕಳುಹಿಸುತ್ತಿವೆ. ಇನ್ನುಮುಂದೆ ಇ-ಕಚೇರಿಗೆ ಒಳಪಡುವ ಎಲ್ಲ ಇಲಾಖೆಗಳು ಕಡ್ಡಾಯವಾಗಿ ಖಡತಗಳನ್ನು ಇ-ಕಚೇರಿ ಮೂಲಕವೇ ವರ್ಗಾವಣೆ ಮಾಡಬೇಕು. ಈ ಬಗ್ಗೆ ಇಲಾಖಾ ಮುಖ್ಯಸ್ಥರು ವಿಷಯ ನಿರ್ವಾಹಕರಿಗೆ ಸೂಕ್ತ ತರಬೇತಿಯನ್ನು ಒದಗಿಸಬೇಕು ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಅಪರ ಜಿಲ್ಲಾಧಿಕಾರಿ ಸಾವಿತ್ರಿ ಬಿ.ಕಡಿ, ಸಹಾಯಕ ಆಯುಕ್ತರಾದ ಕ್ಯಾ. ಮಹೇಶ ಮಾಲಗಿತ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಕಾವ್ಯಾರಾಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಭೂಸ್ವಾಧೀನ ಪ್ರಾಧಿಕಾರದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಯುಡಬ್ಲ್ಯೂಜೆ ರಾಜ್ಯಮಟ್ಟದ ಕ್ರಿಕೆಟ್ ಟೂರ್ನಮೆಂಟ್ ಲಾಂಛನ ಅನಾವರಣ



**ಹಂಪಿ ಟೈಮ್ಸ್ ಬೆಳಗಾವಿ**
ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ದಿಂದ ಜ. 5 ರಿಂದ 7 ತನಕ 3ದಿನಗಳ ಕಾಲ ಮಂಗಳೂರು ಅಡ್ಯಾರ್ ಸಹ್ಯಾದ್ರಿ ಎಂಜಿನೀಯರಿಂಗ್ ಕಾಲೇಜು ಮೈದಾನದಲ್ಲಿ ಏರ್ಪಡಿಸಿರುವ ರಾಜ್ಯ ಮಟ್ಟದ ಕ್ರಿಕೆಟ್ ಟೂರ್ನಮೆಂಟ್(ಬ್ರ್ಯಾಂಡ್ ಮಂಗಳೂರು ರೋಹನ್ ಕಪ್) ಲಾಂಛನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಳಗಾವಿ ಸುವರ್ಣ ಸೌಧದಲ್ಲಿ ಮಂಗಳವಾರ ಅನಾವರಣ ಮಾಡಿದರು.

ಜ.5ರಂದು ಸಹ್ಯಾದ್ರಿ ಕ್ರೀಡಾಂಗಣದಲ್ಲಿ ನಡೆಯುವ ಉದ್ಘಾಟನಾ ಸಮಾರಂಭಕ್ಕೆ ಮುಖ್ಯಮಂತ್ರಿಗಳನ್ನು ಆಹ್ವಾನಿಸಲಾಯಿತು. ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದಲ್ಲಿ 35ನೇ ರಾಜ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಸಂಘಟಿಸಲಾಗಿದ್ದು, ಈಗ ರಾಜ್ಯ ಮಟ್ಟದ ಕ್ರಿಕೇಟ್ ಕ್ರೀಡಾಕೂಟವನ್ನ ಸಂಘಟಿಸಲಾಗುತ್ತಿದೆ ಎಂಬುವುದನ್ನು ಅವರ ಗಮನಕ್ಕೆ ತರಲಾಯಿತು. ಲಾಂಛನ ಅನಾವರಣ ಮಾಡಿದ ಸಿಎಂ, ಕ್ರಿಕೆಟ್ ಟೂರ್ನಮೆಂಟ್‌ಗೆ ಶುಭಕೋರಿದರು.

ಲಾಂಛನ ಅನಾವರಣ ಸಂದರ್ಭದಲ್ಲಿ ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್, ಮಾಜಿ ಸಚಿವ ಅಭಯಚಂದ್ರ ಜೈನ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ ನಾಯಕ್ ಇಂಡಾಜೆ, ಪಂದ್ಯಾವಳಿಯ ಪ್ರಧಾನ ಸಂಚಾಲಕ ಅನ್ನು ಮಂಗಳೂರು, ಉಪಾಧ್ಯಕ್ಷ ಭಾಸ್ಕರ್ ರೈ. ಕೆ, ಕೋಶಾಧಿಕಾರಿ ಪುಷ್ಪ ರಾಜ್ ಬಿ.ಎನ್, ಪದಾಧಿಕಾರಿಗಳಾದ, ರಾಜೇಶ ದಡ್ಡಂಗಡಿ, ರಾಜೇಶ್ ಶೆಟ್ಟಿ, ಸಂದೇಶ ಜಾರ ಮತ್ತಿತರರಿದ್ದರು.

**ನೋಂದಣಿಗೆ ಡಿ.20 ಕಡೆ ದಿನ:**
ಟೂರ್ನಮೆಂಟ್‌ಗೆ ನೋಂದಣಿ ಮಾಡಿಕೊಳ್ಳಲು ಡಿ.20 ಕೊನೆಯ ದಿನವಾಗಿದ್ದು, ಆಯಾ ಜಿಲ್ಲೆಯಿಂದ ಭಾಗವಹಿಸುವ ತಂಡಗಳು ಶೀಘ್ರವೇ ನೋಂದಣಿ ಮಾಡಿಕೊಳ್ಳುವಂತೆ ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ ನಾಯಕ್ ಇಂಡಾಜೆ ಕೋರಿದ್ದಾರೆ.

# ಹನುಮಮಾಲಾ ಸಮಿತಿಗಳಿಗೆ ಜವಾಬ್ದಾರಿ ಹಂಚಿಕೆ

### ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿಕೆ । ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿದಲ್ಲಿ ಕಠಿಣ ಕ್ರಮ

**ಹಂಪಿ ಟೈಮ್ಸ್ ಕೊಪ್ಪಳ:**



ಗಂಗಾವತಿ ತಾಲ್ಲೂಕಿನ ಚಿಕ್ಕರಾಂಪೂರ ಗ್ರಾಮದ ಅಂಜನಾದ್ರಿ ಬೆಟ್ಟದ ಮೇಲಿರುವ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಡಿಸೆಂಬರ್ 23 ಮತ್ತು 24 ರಂದು ಜರುಗಲಿರುವ ಹನುಮಾಲಾ ಕಾರ್ಯಕ್ರಮಕ್ಕೆ ವಿವಿಧ ಸಮಿತಿಗಳನ್ನು ರಚಿಸುವ ಕುರಿತಂತೆ ಇತ್ತೀಚೆಗೆ ನಡೆದ ಸಭೆಯಲ್ಲಿ ಜಿಲ್ಲಾಧಿಕಾರಿ ನಲಿನ್ ಅತುಲ್ ಸಮಿತಿ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಿದರು.

ಆಂಜನೇಯ ದೇವಸ್ಥಾನಕ್ಕೆ ಡಿ.23 ಮತ್ತು 24 ರಂದು ದೇಶದ ವಿವಿಧ ರಾಜ್ಯಗಳಿಂದ ಲಕ್ಷಾಂತರ ಭಕ್ತಾದಿಗಳು ಬಂದು ವಾಸ್ತವ್ಯ ಮಾಡಿ, ನಂತರದಲ್ಲಿ ಕಾಲ್ನಡಿಗೆ ಮೂಲಕ ದೇವರ ದರ್ಶನ ಪಡೆಯಲಿದ್ದಾರೆ. ಗಂಗಾವತಿ ನಗರದಿಂದ ಹನುಮಮಾಲಾಧಾರಿಗಳಿಂದ ಸಂಕೀರ್ತನಾ ಯಾತ್ರೆ ಹಾಗೂ ಡಿ.24 ರಂದು ಮಾಲೆ ವಿಸರ್ಜನೆ ಮಾಡುವ ಕಾರ್ಯಕ್ರಮವಿರುತ್ತದೆ. ಈ ಸಂದರ್ಭದಲ್ಲಿ ಭಕ್ತಾದಿಗಳಿಗೆ ಮೂಲಭೂತ ಸೌಕರ್ಯಗಳನ್ನು ವ್ಯವಸ್ಥಿತವಾಗಿ ಕಲ್ಪಿಸುವ ನಿರ್ವಹಣೆಯ ಮೇಲುಸ್ತುವಾರಿ ಮಾಡಲು ಕೊಪ್ಪಳ ಉಪ ವಿಭಾಗಾಧಿಕಾರಿಗಳನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ. ಅದರಂತೆ ಆಹಾರ ವ್ಯವಸ್ಥೆ, ಜನಸಂದಣಿ ನಿರ್ವಹಣೆ ಹಾಗೂ ಇನ್ನಿತರ ಕಾರ್ಯಗಳಿಗಾಗಿ ಸಮಿತಿಗಳ ರಚನೆ ಮಾಡಿದ್ದು, ಸಮಿತಿ ಅಧಿಕಾರಿ, ಸಿಬ್ಬಂದಿ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಿಳಿಸಿದರು.

ಮೂಲಭೂತ ಸೌಕರ್ಯ ಸಮಿತಿಯಲ್ಲಿ ಚಿಕ್ಕರಾಂಪೂರದ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಆಡಳಿತಾಧಿಕಾರಿ ಅಧ್ಯಕ್ಷತೆಯಲ್ಲಿ ಹಾಗೂ ತೋಟಗಾರಿಕೆ ಉಪನಿರ್ದೇಶಕರು, ದೇವಸ್ಥಾನದ ಕಾರ್ಯನಿರ್ವಹಣಾಧಿಕಾರಿಗಳು, ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು, ಗಂಗಾವತಿ, ಕಾರಟಗಿ, ಕನಕಗಿರಿ ತಹಶೀಲ್ದಾರರನ್ನು ಸದಸ್ಯರನ್ನಾಗಿ ನೇಮಕ ಮಾಡಲಾಗಿದ್ದು, ಈ ಸಮಿತಿಯು ಭಕ್ತಾದಿಗಳ ಊಟದ ವ್ಯವಸ್ಥೆಯ ಸಲುವಾಗಿ ಹಾಗೂ ಅಗತ್ಯವಿರುವ ಸ್ಥಳಗಳಲ್ಲಿ ಪೆಂಡಾಲ್, ದೇವಸ್ಥಾನದ ಪಾದಗಟ್ಟಿ ಹತ್ತಿರ ಎಲ್ಇಡಿ ಪರದೆ, ದೇವಸ್ಥಾನದ ಮೆಟ್ಟಿಲುಗಳ ಮೇಲೆ ಧ್ವನಿ ವರ್ಧಕಗಳ ವ್ಯವಸ್ಥೆನ್ನು ಮಾಡಬೇಕು. ದೇವಸ್ಥಾನದ ಹತ್ತಿರ, ವಾಹನ ನಿಲುಗಡೆ ಸ್ಥಳ, ಬಸ್ ನಿಲ್ದಾನ ಹಾಗೂ ಇನ್ನಿತರ ಅಗತ್ಯವಿರುವ ಸ್ಥಳಗಳಲ್ಲಿ ಸಾರ್ವಜನಿಕ ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸುವುದು, ಪೆಂಡಾಲ್ ಹಾಕಿಸುವುದು ಹಾಗೂ ಸಾರ್ವಜನಿಕ ಪ್ರಕಟಣೆ ಸಲುವಾಗಿ ಧ್ವನಿವರ್ಧಕಗಳ ವ್ಯವಸ್ಥೆ, ತುಂಗಭದ್ರಾ ನದಿ ಪಾತ್ರದಲ್ಲಿ ಹನುಮ ಮಾಲಾಧಾರಿಗಳಿಗೆ ಸ್ನಾನಕ್ಕಾಗಿ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಹೇಳಿದರು.

ಆಹಾರ ಹಾಗೂ ನಾಗರಿಕರ ಸರಬರಾಜು ಇಲಾಖೆಯ ಉಪನಿರ್ದೇಶಕರ ಅಧ್ಯಕ್ಷತೆಯಲ್ಲಿ ಆಹಾರ ಸಮಿತಿ. ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರ ಅಧ್ಯಕ್ಷತೆಯಲ್ಲಿ ರಸ್ತೆ ನಿರ್ವಹಣಾ ಸಮಿತಿ. ಆರೋಗ್ಯ ಸಮಿತಿಯು ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಸಾಂಕ್ರಾಮಿಕ ರೋಗಗಳು ಹರಡದಂತೆ ಮುನನೆಚ್ಚರಿಕಾ ಕ್ರಮ ವಹಿಸುವ ನಿಟ್ಟಿನಲ್ಲಿ ಕ್ರಿಮಿನಾಶಕ ಸಿಂಪಡಣೆ, ಅಗತ್ಯ ಔಷಧಿಗಳ ವ್ಯವಸ್ಥೆಯೊಂದಿಗೆ ದೇವಾಲಯದ ಆವರಣದಲ್ಲಿ ಹಗೂ ಅಗತ್ಯವಿರುವ ಸ್ಥಳಗಳಲ್ಲಿ ತಾತ್ಕಾಲಿಕ ತುರ್ತು ಚಿಕಿತ್ಸಾ ಕೇಂದ್ರವನ್ನು ಪ್ರಾರಂಭಿಸಬೇಕು. ದೇವಸ್ಥಾನದ ವತಿಯಿಂದ ಸಾರ್ವಜನಿಕರಿಗೆ ಹಾಗೂ ಭಕ್ತಾದಿಗಳಿಗೆ ತಯಾರಿಸಲಾಗಿರುವ ಆಹಾರದ ಗುಣಮಟ್ಟವನ್ನು ಪರಿಶೀಲಿಸಿ ಪ್ರಮಾಣೀಕರಿಸಬೇಕು ಎಂದು ತಿಳಿಸಿದರು.

ಸ್ವಚ್ಛತಾ ಸಮಿತಿಯು, ಗಂಗಾವತಿ ನಗರದಿಂದ ಹನುಮಮಾಲಾಧಾರಿಗಳ ಶೋಭಾ ಯಾತ್ರೆ ಆರಂಭವಾಗುವ ಕಾರಣ ನಗರದ ಎಲ್ಲ ಕಡೆಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಹನುಮಮಾಲಾಧಾರಿಗಳು ತಂಗುವ ಸಲುವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಶೌಚಾಲಯ ಹಾಗೂ ಸ್ನಾನ ಗೃಹಗಳು ಇರುವ ಕಡೆಗೆ ವಿದ್ಯಾರ್ಥಿ ನಿಲಯಗಳು, ಇತರೆ ಸರ್ಕಾರಿ, ಖಾಸಗಿ ಕಟ್ಟಡಗಳನ್ನು ಗುರುತಿಸಿ, ಯಾವುದೇ ತರಹದ ಅನಾನುಕೂಲವಾಗದಂತೆ ನಿಗಾ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಾರಿಗೆ ಸಮಿತಿಯು ಕೊಪ್ಪಳ, ಗಂಗಾವತಿ, ಹೊಸಪೇಟೆ ಹಾಗೂ ಇತರೆ ಅಗತ್ಯವಿರುವ ಸಾರಿಗೆ ಘಟಕಗಳಿಂದ ಅಂಜನಾದ್ರಿ ಬೆಟ್ಟಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಬಸ್ ಸೌಕರ್ಯವನ್ನು ಕಲ್ಪಿಸಬೇಕು. ವಾಹನ ನಿಲುಗಡೆ ಸ್ಥಳದಿಂದ ಅಂಜನಾದ್ರಿ ಬೆಟ್ಟಕ್ಕೆ ಭಕ್ತಾದಿಗಳ ಸಂಚಾರಕ್ಕೆ ಮಿನಿ ಬಸ್‌ಗಳ ವ್ಯವಸ್ಥೆಯನ್ನು ಮಾಡಬೇಕು. ವಿದ್ಯುತ್ ಸಮಿತಿಯು ಹನುಮಮಾಲಾ ಸಮಯದಲ್ಲಿ ದೇವಸ್ಥಾನದ ಸುತ್ತಮುತ್ತಲೂ ಯಾವುದೇ ತರಹದ ವಿದ್ಯುತ್ ವ್ಯತ್ಯಯ ಉಂಟಾಗದಂತೆ ಹಾಗೂ ಯಾವುದೇ ತರಹದ ವಿದ್ಯುತ್ ಅವಘಡಗಳು ಉಂಟಾಗದಂತೆ ಕ್ರಮ ವಹಿಸಬೇಕು. 24/7 ಮಾದರಿಯಲ್ಲಿ ವಿದ್ಯುತ್ ಸೌಕರ್ಯದ ನಿರ್ವಹಣೆಗೆ ಅಗತ್ಯವಿರುವ ಎಲ್ಲ ಸಾಮಗ್ರಿಗಳುಳ್ಳ ಒಂದು ಮೊಬೈಲ್ ವಾಹನದ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು.

ಭಕ್ತಾದಿಗಳಿಗೆ, ಸಾರ್ವಜನಿಕರಿಗೆ ಹಾಗೂ ಹನುಮಮಾಲಾಧಾರಿಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಬೇಕು. ಅಬಕಾರಿ ಸಮಿತಿಯು ಡಿ.22 ರ ಸಂಜೆ 04 ಗಂಟೆಯಿಂದ ಡಿ.24 ರ ಮಧ್ಯರಾತ್ರಿಯವರೆಗೆ ಆನೆಗುಂದಿ ಗ್ರಾಮ ವ್ಯಾಪ್ತಿಯಿಂದ ಸುತ್ತಲಿನ 10 ಕಿ.ಮೀ. ವ್ಯಾಪ್ತಿಯಲ್ಲಿ ಮದ್ಯಪಾನ ನಿಷೇಧಿಸಬೇಕು. ನಿಯೋಜಿತ ಅಧಿಕಾರಿಗಳು ಸಂಬಂಧಿಸಿದ ಮೇಲಧಿಕಾರಿಗಳು, ವಿವಿಧ ಸಮಿತಿಗಳೊಂದಿಗೆ ಸಮನ್ವಯ ಸಾಧಿಸಿ ಸಾರ್ವಜನಿಕರಿಗೆ, ಭಕ್ತಾಧಿಗಳಿಗೆ ಯಾವುದೇ ತರಹದ ಅನಾನುಕೂಲವಾಗದಂತೆ ಕರ್ತವ್ಯ ನಿರ್ವಹಿಸಬೇಕು. ನಿಯೋಜಿತ ಅಧಿಕಾರಿಗಳು ಕರ್ತವ್ಯ ನಿರ್ವಹಣೆಯಲ್ಲಿ ಯಾವುದೇ ತರಹದ ಲೋಪವೆಸಗಿದಲ್ಲಿ ಕಠಿಣ ಕ್ರಮವನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು. ಸಭೆಯಲ್ಲಿ ನಿಯೋಜಿತ ಸಮಿತಿಗಳ ಅಧ್ಯಕ್ಷರು, ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾನವ ಹಕ್ಕುಗಳ ಅರಿವು



**ಹಂಪಿ ಟೈಮ್ಸ್ ಕೊಪ್ಪಳ**
ಮಾನವ ಹಕ್ಕನ್ನು ಪ್ರತಿಯೊಬ್ಬ ನಾಗರಿಕರು ತಿಳಿದುಕೊಳ್ಳಬೇಕಾದ ಅಗತ್ಯವಿದೆ. ಇದಕ್ಕಾಗಿ ಸಮುದಾಯಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಯುವ ವಕೀಲರಾದ ಕೃಷ್ಣ ಈಳಗೇರ ಹೇಳಿದರು.

ಭಾನುವಾರದಂದು ನಗರದ ಜಿಲ್ಲಾ ಆಸ್ಪತ್ರೆಯ ಹಿಂಭಾಗದ ಸಖಿ ಒನ್ ಸ್ಟಾಪ್ ಸೆಂಟರನಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ (ರಿ) ಕೊಪ್ಪಳ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನಾ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ದೇವದಾಸಿ ಪುನರ್ವಸತಿ ಯೋಜನೆ, ಸಖಿ ಒನ್ ಸ್ಟಾಪ್ ಸೆಂಟರ್, ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್-ಕೊಪ್ಪಳ, ಸ್ಫೂರ್ತಿ ಕಲೆಕ್ಟಿವ್ ಗ್ರೂಪ್, ಮಕ್ಕಳ ಪ್ರಾಯೋಗಿಕ ಕಲಿಕಾ ಭೇಟಿ, ಹನುಮನಟ್ಟಿ, ಇರಕಲ್ಲಗಡ ಗ್ರಾಮ ಪಂಚಾಯಿತಿ, ನಿತ್ಯ ಕರ್ನಾಟಕ ದಿನ ಪತ್ರಿಕೆ ಸಹಯೋಗದಲ್ಲಿ ಮನುಕುಲದ ಮಹಾ ಸನ್ನದು – ಮಾನವ ಹಕ್ಕುಗಳ ಘೋಷಣೆಯ ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ವ್ಯಕ್ತಿಯು ಗೌರವದಿಂದ ಬದುಕಲು ಮತ್ತು ಅವನ ಸ್ವಾತಂತ್ರ ?ಯಕ್ಕೆ ಅಡ್ಡಿಯಾಗದಂತೆ ಅಗತ್ಯವಾದ ಮಾನವ ಘನತೆಯ ಹಕ್ಕುಗಳನ್ನು ಎಲ್ಲರಿಗೂ ದೊರೆಯುವಂತೆ ಜಾರಿಗೊಳಿಸಲಾಗಿದೆ. ಈ ಬಗ್ಗೆ ಎಲ್ಲರಿಗೂ ತಿಳುವಳಿಕೆ ಮೂಡಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಖಿ ಒನ್ ಸ್ಟಾಪ್ ಸೆಂಟರಿನ ಅಡಳಿತಾಧಿಕಾರಿ ಯಮುನಾ ಬೆಸ್ತರ್, ಭ್ರಾತೃತ್ವ ಸಮಿತಿಯ ಜಿಲ್ಲಾ ಸಂಚಾಲಕ ಎಸ್.ಎ.ಗಫಾರ್, ದೇವದಾಸಿ ಪುನರ್ವಸತಿ ಯೋಜನಾಧಿಕಾರಿ ಪೂರ್ಣಿಮಾ ಏಳುಬಾವಿ, ವಕೀಲರಾದ ವಿಜಯಲಕ್ಷಿ ?ಮೇ ಕಣವಿ, ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್ನ ಜ್ಯೋತಿ ಕುಂಬಾರ, ಅಸ್ಮಾ ಬೇಗಂ ಮುಜಾವರ್, ನೇತ್ರಾವತಿ ಸಂಗನಾಳ ಮತ್ತು ಇರಕಲ್ಲಗಡ ಗ್ರಾಮ, ಹನುಮನಾಳ ಗ್ರಾಮ,. ಮೆತಗಲ್ ಗ್ರಾಮ, ತಾಳ ಕನಕಾಪುರ ಮುಂತಾದ ಗ್ರಾಮಗಳ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

**ಗಂಗಾವತಿ ಸ್ನಾತಕೋತ್ತರ ಕೇಂದ್ರ ಪ್ರವೇಶ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ**
ಕೊಪ್ಪಳ ಡಿಸೆಂಬರ್ 11(ಕರ್ನಾಟಕವಾರ್ತೆ): ಕೊಪ್ಪಳ ವಿಶ್ವವಿದ್ಯಾನಿಲಯದದಿಂದ ಗಂಗಾವತಿಯಲ್ಲಿ ನೂತನವಾಗಿ ಆರಂಭವಾಗಿರುವ ಸ್ನಾತಕೋತ್ತರ ಕೇಂದ್ರದಲ್ಲಿ ಎಂ.ಎ ಕನ್ನಡ, ಇಂಗ್ಲೀಷ್ ಹಾಗೂ ಎಂ.ಕಾಂ ಸ್ನಾತಕೋತ್ತರ ಕೋರ್ಸುಗಳಿಗೆ ಅರ್ಜಿ ಸಲ್ಲಿಕೆ ಅವಧಿಯನ್ನು ಡಿಸೆಂಬರ್ 14 ರವರೆಗೆ ವಿಸ್ತರಿಸಲಾಗಿದೆ.

2023-24ನೇ ಶೈಕ್ಷಣಿಕ ಸಾಲಿನ ಕೊಪ್ಪಳ ವಿಶ್ವವಿದ್ಯಾಲಯದ ಸ್ನಾತಕೋತ್ತರ ಪದವಿಗಳಿಗೆ ಪ್ರವೇಶಾತಿಗೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಕೆಗೆ ಡಿ.03 ರವರೆಗೆ ಅವಕಾಶ ಕಲ್ಪಿಸಲಾಗಿತ್ತು. ಪ್ರಸ್ತುತ ಈ ಅವಧಿಯನ್ನು ಡಿ.14 ರವರೆಗೆ ವಿಸ್ತರಿಸಲಾಗಿದೆ.

ಈಗಾಗಲೇ ಪ್ರಸಕ್ತ ಸಾಲಿನಲ್ಲಿ ಸ್ನಾತಕೋತ್ತರ ಪದವಿಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ತಮ್ಮ ದಾಖಲೆಗಳ ಪರಿಶೀಲನೆ ಸಂದರ್ಭದಲ್ಲಿ ನೂತನವಾಗಿ ಪ್ರಾರಂಭಗೊಂಡಿರುವ ಕೊಪ್ಪಳ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ ಗಂಗಾವತಿಗೆ ಪ್ರವೇಶದ ಆದ್ಯತೆಯನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿರುತ್ತದೆ. ಸ್ನಾತಕೋತ್ತರ ಪದವಿಗಳ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅದರ ಪ್ರತಿಯನ್ನು ಡಿ.14 ರಂದು ಸಂಜೆ 05 ಗಂಟೆಯೊಳಗೆ ಕಡ್ಡಾಯವಾಗಿ ಕುಲಸಚಿವರು (ಆಡಳಿತ)(ಪ್ರಭಾರ), ಕೊಪ್ಪಳ ವಿಶ್ವ ವಿದ್ಯಾಲಯ, ಸರ್ಕಾರಿ ತಾಂತ್ರಿಕ ಮಹಾವಿದ್ಯಾಲಯ, ತಳಕಲ್-583238 ಇವರ ಕಚೇರಿಗೆ ತಲುಪಿಸಬೇಕು. ಒಂದು ವೇಳೆ ತಲುಪಿಸದೇ ಇದ್ದಲ್ಲಿ ಅಂತಹ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ ಎಂದು ಕೊಪ್ಪಳ ವಿವಿಯ ಕುಲಸಚಿವರು ತಿಳಿಸಿದ್ದಾರೆ.

## ತುಂಗಭದ್ರಾ ನೀರಿನ ಮಟ್ಟ



| ಮಂಗಳವಾರ : 12-12-2023 | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1591.19 ಅಡಿ |
| ಒಳ ಹರಿವು | 658 ಕ್ಯುಸೆಕ್ |
| ಹೊರ ಹರಿವು | 1924 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 12.055 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| ಕಳೆದ ವರ್ಷ ಇದೇ ದಿನ | |
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1628.13 ಅಡಿ |
| ಒಳ ಹರಿವು | 248 ಕ್ಯುಸೆಕ್ |
| ಹೊರ ಹರಿವು | 6779 ಕ್ಯುಸೆಕ್ |
| ಸಾಮರ್ಥ್ಯ | 87.201 ಟಿಎಂಸಿ |

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

# ಜಾನಪದ ಕಲಾ ತಂಡಗಳಿಂದ ಅರಿವು

**ಮೊದಲ ಪುಟದಿಂದ**
ಕನ್ನಡ ವಿವಿ ಕುಲಪತಿ ಡಾ. ಡಿ.ವಿ.ಪರಮಶಿವಮೂರ್ತಿ ಮಾತನಾಡಿ, ಅನಕ್ಷರಸ್ಥರಿಗೆ ಜನಪದ ಕಲೆ ಮೂಲಕ ಆರೋಗ್ಯ ಜಾಗೃತಿ ಮೂಡಿಸಲು ಸರ್ಕಾರ, ಆರೋಗ್ಯ ಇಲಾಖೆಯು ಕಾರ್ಯಕ್ರಮವನ್ನು ರೂಪಿಸಿದೆ. ಅನಕ್ಷರಸ್ಥರಿಗೆ ಲಿಪಿಗಿಂತ ಭಾಷೆ ಹೆಚ್ಚು ಸಂವಹನವನ್ನು ನೀಡುತ್ತದೆ. ಜಾನಪದ ಕಲೆಗಳು ನೋಡುವ ಮತ್ತು ಭಾಷೆಯಲ್ಲಿ ಕೇಳುವ ಕಲಾ ಪ್ರಕಾರಗಳಾಗಿದ್ದು, ಇಂತಹ ಕಲಾ ಪ್ರಕಾರಗಳ ಮೂಲಕ ಅರಿವು ಮೂಡಿಸಲು ಸಾಮಾನ್ಯರಿಗೆ ಪ್ರಭಾವಿಸುತ್ತವೆ. ಕನ್ನಡ ವಿಶ್ವವಿದ್ಯಾಲಯವು ಆರಂಭಗೊಂಡು ಇಂದಿಗೆ 33 ವರ್ಷಗಳು ಕಳೆದಿವೆ. ಈ ವಿದ್ಯಾಲಯವು ಜನಪದ ಮತ್ತು ಬುಡಕಟ್ಟು ಕಲೆಗಳ ಬಗ್ಗೆ ಉತ್ತಮ ಸಂಶೋಧನೆಗಳನ್ನು ಮಾಡಿ, ಪುಸ್ತಕಗಳನ್ನು ಪ್ರಕಟಿಸಿ, ವಿಚಾರ ಸಂಕಿರಣಗಳು ಹಾಗೂ ಉಪನ್ಯಾಸ ಗಳನ್ನು ಏರ್ಪಡಿಸಿದೆ. ಜನಪದ ಸಾಹಿತ್ಯದ ಮಹತ್ವವನ್ನು ಜನಸಾಮಾನ್ಯರಿಗೆ ಹಾಗೂ ವಿದ್ಯಾವಂತರಿಗೆ ತಲುಪಿಸುವಲ್ಲಿ ದೊಡ್ಡ ಪ್ರಯತ್ನವನ್ನು ನಮ್ಮ ವಿವಿ ಯಿಂದಾಗಿದೆ ಎಂದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಬಿ.ಜಂಬಯ್ಯಅವರು ಪ್ರಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಭೀಮಪ್ಪ ಲಾಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಲ್.ಆರ್.ಶಂಕರ್ ನಾಯ್ಕ್, ಸಂಪನ್ಮೂಲ ವ್ಯಕ್ತಿಗಳಾದ ಮಹೇಶ ಪಾಟೀಲ್ ಹಾಗೂ ವಿಶ್ವನಾಥ ಪಾಟೀಲ್ ಸೇರಿದಂತೆ ವಿವಿಧ ಆರೋಗ್ಯಾಧಿಕಾರಿಗಳು, ವಿವಿಧ ಜಿಲ್ಲೆಗಳ ಆರೋಗ್ಯ ಶಿಕ್ಷಣಾಧಿಕಾರಿಗಳು ಮತ್ತಿತರಿದ್ದರು. ಹೊಸಪೇಟೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಭಾಸ್ಕರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಪಿ.ದೊಡ್ಡಮನಿ ನಿರ್ವಹಿಸಿದರು.

**ಮೈಕ್ರೋ ನ್ಯೂಸ್**

## ಸಕ್ಕರೆ ಕಾರ್ಖಾನೆಗಳಲ್ಲಿ ತೂಕದ ಯಂತ್ರ ಡಿಜಿಟಲೀಕರಣಕ್ಕೆ ಸೂಚನೆ: ಸಚಿವ ಕೆ.ಎಚ್.ಮುನಿಪ್ಪ



**ಬೆಳಗಾವಿ ಸುವರ್ಣ ವಿಧಾನಸೌಧ:**
ಕಬ್ಬಿನ ತೂಕದಲ್ಲಿ ಆಗುತ್ತಿರುವ ಮೋಸವನ್ನು ನಿಯಂತ್ರಿಸಲು ರಾಜ್ಯದ ಸಕ್ಕರೆ ಕಾರ್ಖಾನೆಗಳಲ್ಲಿನ ತೂಕದ ಯಂತ್ರಗಳ ಡಿಜಿಟಲೀಕರಣಕ್ಕೆ ಸರ್ಕಾರ ಸೂಚನೇ ನೀಡಿದ್ದು, ಈ ಸಂಬಂಧ ಕಾರ್ಖಾನೆಗಳ ಮಾಲಿಕರಿಗೆ ಹದಿನೈದು ದಿನಗಳ ಗಡುವು ನೀಡಲಾಗಿದೆ ಎಂದು ಆಹಾರ, ನಾಗರಿಕ ಪೂರೈಕೆ ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರಾದ ಕೆ.ಎಚ್.ಮುನಿಯಪ್ಪ ತಿಳಿಸಿದರು. ಕೊಠಡಿ ಸಂಖ್ಯೆ 354ರಲ್ಲಿ ಮಂಗಳವಾರ ಸಚಿವ ಶಿವಾನಂದ ಪಾಟೀಲ, ಶಾಸಕ ಲಕ್ಷ್ಮಣ ಸವದಿ ಸೇರಿದಂತೆ ಕಬ್ಬು ಬೆಳೆಯುವ ಪ್ರದೇಶಗಳ ವ್ಯಾಪ್ತಿಯ ಜನಪ್ರತಿನಿಧಿಗಳು, ಕಾನೂನು ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.
ಪ್ರಸಕ್ತ ಹಂಗಾಮಿನಲ್ಲಿ 78 ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುತ್ತಿವೆ. ಇದರಲ್ಲಿ 24 ಮಾತ್ರ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಿಕೊಂಡಿದ್ದು, ಉಳಿದ 54 ಕಾರ್ಖಾನೆಗಳು ಮುಂದಿನ ಹದಿನೈದು ದಿನಗಳಲ್ಲಿ ಡಿಜಿಟಲ್‌ಗೆ ಪರಿವರ್ತನೆ ಆಗಬೇಕು ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.
ರೈತರು, ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಯಾವುದೇ ಕಾರಣಕ್ಕೂ ಮೋಸ ಆಗಬಾರದು. ರೈತರ ಗದ್ದೆಗಳಿಂದ ಲಾರಿಯಲ್ಲಿ ಎಷ್ಟು ಕಬ್ಬು ಬಂದಿರುತ್ತದೆಯೋ ಅಷ್ಟೇ ತೂಕ ಕಾರ್ಖಾನೆಗಳಲ್ಲಿ ತೂಕ ಮಾಡಿದಾಗಲೂ ಬರಬೇಕು. ಸರಿಯಾಗಿ ತೂಕ ಮಾಡದಿದ್ದರೆ, ಕಠಿಣ ಕ್ರಮ ಕೈಗೊಳ್ಳುವುದು ಅನಿವಾರ್ಯ ಆಗಲಿದೆ ಎಂದು ಎಚ್ಚರಿಸಿದರು. ಡಿಜಿಟಲ್ ತೂಕ ಯಂತ್ರಗಳ ಅಳವಡಿಕೆಗೆ ಸಂಬಂಧಿಸಿದಂತೆ ಬೆಳಗಾವಿ ಮತ್ತು ಕಲಬುರಗಿ ಕಂದಾಯ ವಿಭಾಗಗಳ ಮಾಪನಶಾಸ್ತ್ರ ಇಲಾಖೆಯ ಜಂಟಿ ನಿರ್ದೇಶಕರು, ಉಪನಿರ್ದೇಶಕರು, ನಿಯಂತ್ರಕರು ಸೇರಿದಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದೂ ಹೇಳಿದರು. ಪ್ರಸ್ತುತ 5 ಕೆಜಿ ಅಕ್ಕಿ ಬದಲಿಗೆ ಗ್ರಾಹಕರಿಗೆ ನಗದು ನೀಡಲಾಗುತ್ತಿದೆ. ಹಲವು ಪ್ರಯತ್ನಗಳ ನಂತರವೂ ಅಕ್ಕಿ ದೊರೆಯದ ಕಾರಣ ಹಣ ನೀಡಲಾಗುತ್ತಿದೆ. ಆಂಧ್ರಪ್ರದೇಶ ಮತ್ತು ತೆಲಂಗಾಣದೊಂದಿಗೆ ಮತ್ತೊಮ್ಮೆ ಮಾತುಕತೆ ನಡೆಸಿ, ಅಕ್ಕಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಪತ್ರಕರ್ತರ ಪ್ರಶ್ನೆಗ ಪ್ರತಿಕ್ರಿಯಿಸಿದರು.

ನಿಮ್ಮ ಹೊಸ ಹೊಸ ಉತ್ಪನ್ನಗಳು, ವಿಶೇಷ ಕೊಡುಗೆಗಳು ಮತ್ತು ಕಾಲೇಜು ಪ್ರವೇಶ ಕುರಿತು ನಿಮ್ಮ ಗ್ರಾಹಕರಿಗೆ ಮಾಹಿತಿ ನೀಡಲು ಬಯಸಿದ್ದೀರಾ? ಇಂದೇ ಸಂಪರ್ಕಿಸಿ:
ಹಂಪಿ ಟೈಮ್ಸ್ : ಮೊ:
9448633038




# ಅರಿವೇ ಬದುಕಿಗೆ ಬೆಳಕು

### ತಹಶೀಲ್ದಾರ್ ಜಿ.ಕೆ. ಅಮರೇಶ ಹೇಳಿಕೆ । ವಿಶ್ವಮಾನವ ಹಕ್ಕುಗಳ ದಿನಾಚರಣೆ



■ **ಹಂಪಿ ಟೈಮ್ಸ್ ಕೊಟ್ಟೂರು**
ಕಾನೂನಿನ ಅರಿವು ಇದ್ದಲ್ಲಿ ಶಾಂತಿ, ಸಹಬಾಳ್ವೆಯಿಂದ ಬದುಕಲು ಸಾಧ್ಯ. ಪ್ರತಿಯೊಬ್ಬರು ಶಿಕ್ಷಣ, ಕಾನೂನಿನ ಜ್ಞಾನ ಪಡೆಯಬೇಕು ಎಂದು ತಹಶೀಲ್ದಾರ್ ಜಿ.ಕೆ. ಅಮರೇಶ ಹೇಳಿದರು.
ತಾಲೂಕಿನ ಸುಟ್ಟಕೋಡಿಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಭಾನುವಾರ ತಾಲೂಕು ಕಾನೂನು ಸೇವಾ ಸಮಿತಿ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವಮಾನವ ಹಕ್ಕುಗಳ ದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ಸಾರ್ವಜನಿಕರಿಗೆ ಕಾನೂನು ಅರಿವು-ನೆರವು ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು. ರೈತರು, ಅನಕ್ಷರಸ್ತರು ಕಾನೂನಿಗೆ ಭಯಪಡುತ್ತಾರೆ. ಗೌರವ ಕೊಡುತ್ತಾರೆ. ಅಕ್ಷರಸ್ಥರಿಂದ ಕಾನೂನು ಉಲ್ಲಂಘನೆಯಾಗುತ್ತಿರುವುದು ಖೇಧಕರ ಎಂದರು.
ಫ್ಯಾನಲ್ ವಕೀಲರಾದ ಕೆ.ಎಚ್.ಎಂ. ಶೈಲಜಾ, ಕೌಟಂಬಿಕ ದೌರ್ಜನ್ಯದಿಂದ ಮಹಿಳೆಯರ ರಕ್ಷಣೆ ಕುರಿತು ಮಾತನಾಡಿ, ಸುಟ್ಟಕೋಡಿಹಳ್ಳಿ ಗ್ರಾಮದಿಂದ ಯಾವುದೇ ಮಹಿಳಾ ದೌರ್ಜನ್ಯದ ಕೇಸು ಬಂದಿಲ್ಲ. ಈ ಗ್ರಾಮದಲ್ಲಿ ಮಹಿಳೆಯರು ಸುರಕ್ಷಿತ ಮತ್ತು ನೆಮ್ಮದಿ, ಶಾಂತಿಯಿಂದ ಇದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ವಿವಾಹಿತ ವಿದ್ಯಾವಂತರಿಂದ ಹೆಚ್ಚು ವಿಚ್ಛೇದನ ಕೇಸುಗಳು ಕೋರ್ಟಗೆ ಬರುತ್ತಿರುವುದು ನಿಜಕ್ಕೂ ಆತಂಕಕಾರಿ ಸಂಗತಿ, ವಿದ್ಯಾವಂತ ವಿವಾಹಿತರಲ್ಲಿ ಸೌಹಾರ್ಧತೆ, ಸಹಬಾಳ್ವೆ ಕೊರತೆ ಹೆಚ್ಚುರುವುದರಿಂದಾಗಿ ವಿಚ್ಛೇದನವಾಗುತ್ತವೆ ಎಂದರು.
ಫ್ಯಾನಲ್ ವಕೀಲರಾದ ಎನ್. ಜಯಮ್ಮ ಮತನಾಡಿ, ಹುಟ್ಟಿದ ಕ್ಷಣದಿಂದಲೂ ಹಕ್ಕುಗಳು ಅನ್ವಯವಾಗುತ್ತವೆ ಎಂದರು.
ಪಿ.ಎಸ್.ಐ. ಮಾಲಿಕ್ ಸಾಹೇಬ್ ಖಲಾರಿ ಮಾತನಾಡಿ, ಒಂದು ವರ್ಷಕ್ಕೆ ಒಂದು ಲಕ್ಷ ಮಕ್ಕಳು, ಹುಡುಗಿಯರು, ಮಹಿಳೆಯರು ಕಣ್ಮರೆಯಾಗುತ್ತವೆ. ಇವರೆಲ್ಲ ಎಲ್ಲಿಗೆ ಹೋಗುತ್ತಾರೆ. ಎಂಬುದೇ ಯಕ್ಷಪ್ರಶ್ನೆಯಾಗಿದೆ. ಶಾಲೆಯಲ್ಲಿ ಕುಡಿತ ಮೋಜಿನ ಪ್ರಕರಣಗಳು ನಡೆದಿರುವುದನ್ನು ನೋಡಿದ್ದೇನೆ. ಇದು ಆಗಬಾರದೆಂದು ಎಚ್ಚರಿಸಿದರು.
ಉಜ್ಜಿನಿ ವಲಯ ಇಸಿಒ ಆನಂದ, ಪಿಡಿಒ ಉಮಾಪತಿ ಮಾತನಾಡಿದರು. ವಕೀಲರ ಸಂಘದ ಉಪಾಧ್ಯಕ್ಷ ವೆಂಕಟೇಶ, ಶಾಲಾಭಿವೃದ್ದಿ ಸಮಿತಿ ಅಧ್ಯಕ್ಷ ಅಣಜಿ ಶಾಂತಕುಮಾರ್, ರೇವಣ್ಣ, ಕೊಟ್ಟೂರು ವಲಯದ ಇಸಿಒ ನಿಂಗಪ್ಪ, ಶಾಲೆ ಮುಖ್ಯಗುರುಗಳಾದ ತಿಪ್ಪಣ್ಣ, ಶಿಕ್ಷಕಿ ಮೆಹಬೂಬ ಇದ್ದರು. ಶಾಲೆ ವಿದ್ಯಾರ್ಥಿಗಳು ಸಾಮಾಜಿಕ ಪಿಡುಗುಗಳ ಘೋಷಣೆ, ನೃತ್ಯ ಗಮನಸೆಳೆಯಿತು. ಸ್ವರ ಸಂಗಮ ಸಂಗೀತ ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಸಿ.ಆರ್.ಪಿ. ದುರುಗಪ್ಪ, ವಕೀಲರಾದ ಕರಿಬಸವರಾಜ್, ರಮೇಶ ನಿರ್ವಹಿಸಿದರು.

# ಆಯುಷ್ಮಾನ್ ಭವಃ ಆರೋಗ್ಯ ಮೇಳಗಳ ಸದುಪಯೋಗ ಪಡೆದುಕೊಳ್ಳಿ

■ **ಹಂಪಿ ಟೈಮ್ಸ್ ಬಳ್ಳಾರಿ**
ಪ್ರತಿ ಮಂಗಳವಾರ ಜಿಲ್ಲೆಯ ಎಲ್ಲ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ನಮ್ಮ ಕ್ಲಿನಿಕ್, ಗ್ರಾಮೀಣ ಭಾಗದ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಜರುಗುವ ಆಯುಷ್ಮಾನ್ ಭವಃ ಉಚಿತ ಆರೋಗ್ಯ ಮೇಳಗಳಲ್ಲಿ ಸಿಗುವ ಎಲ್ಲಾ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಮನವಿ ಮಾಡಿದ್ದಾರೆ.
ಜೀವನ ಶೈಲಿಯ ರೋಗಗಳಾದ ರಕ್ತದೊತ್ತಡ, ಸಕ್ಕರೆ ಕಾಯಿಲೆಯನ್ನು ಪರೀಕ್ಷಿಸಿಕೊಳ್ಳಬೇಕು. ಅದರಲ್ಲೂ 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ಸಹ ಪ್ರತಿ ಆರು ತಿಂಗಳಿಗೊಮ್ಮೆ ಪರೀಕ್ಷೆ ಮಾಡಿಸಿಕೊಳ್ಳುವ ಮೂಲಕ ಜೀವನಶೈಲಿಯ ಕಾಯಿಲೆಗಳಿಂದ ದೂರವಿರಲು ಪ್ರಯತ್ನಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
ಶಿಬಿರದಲ್ಲಿ ಕ್ಷಯರೋಗ ಪರೀಕ್ಷೆ ಹಾಗೂ ರೋಗ ಲಕ್ಷಣಗಳುಳ್ಳುವರ ಕಫ ಪರೀಕ್ಷೆಯನ್ನು ಕೈಗೊಳ್ಳಲಾಗುತ್ತದೆ ಹಾಗೂ ಇತರ ಸಾಮಾನ್ಯ ಆರೋಗ್ಯಸೇವೆಗಳನ್ನುಸಹ ನೀಡಲಾಗುವುದು. ಹೆಚ್ಚಿನ ಚಿಕಿತ್ಸೆ ಅಗತ್ಯ ಇರುವಂತಹ ರೋಗಿಗಳಿಗೆ ಜಿಲ್ಲಾ ಆಸ್ಪತ್ರೆ ಮತ್ತು ವಿಮ್ಸ್‌ಗೆ ಕಳಿಸಿಕೊಡಲಾಗುವುದು ಎಂದು ಅವರು ತಿಳಿಸಿದ್ದಾರೆ.
ಶಿಬಿರದಲ್ಲಿ ಆಯುಷ್ಮಾನ್ ಭವ- ಪ್ರಧಾನ ಮಂತ್ರಿ ಜನಾರೋಗ್ಯ ಯೋಜನೆ- ಮುಖ್ಯಮಂತ್ರಿಯ ಆರೋಗ್ಯ ಕರ್ನಾಟಕ ಯೋಜನೆ ಕಾರ್ಡ್, ಡಿಜಿಟಲ್ ಹೆಲ್ತ್ ಕಾರ್ಡ್‌ಗಳನ್ನು ಸೃಜಿಸಲಾಗುವುದು ಮತ್ತು ಅಂಗಾಂಗ ದಾನ ನೋಂದಣಿಯನ್ನು ಸಹ ಮಾಡಲಾಗುವುದು ಎಂದು ಹೇಳಿದ್ದಾರೆ.
ಶಿಬಿರದಲ್ಲಿ ಡೆಂಗ್ಯು ಮತ್ತು ಚಿಕುನ್ ಗುನ್ಯ ಕುಟುಂಬ ಕಲ್ಯಾಣ ವಿಧಾನಗಳು, ತಾಯಿ ಮಗುವಿನ ಆರೈಕೆ, ಟೆಲಿ ಮನಸ್ ಮಾನಸಿಕ ಆರೋಗ್ಯ ಸಹಾಯವಾಣಿ 14416 ಕುರಿತು ಮಾಹಿತಿ ನೀಡಲಾಗುತ್ತದೆ.
ಸಾರ್ವಜನಿಕರು ತಮ್ಮ ಆಧಾರ್‌ಕಾರ್ಡ್, ಮೊಬೈಲ್ ಹಾಗೂ ಈ ಹಿಂದೆ ಆಸ್ಪತ್ರೆಗೆ ತೋರಿಸಿದ ಚೀಟಿಗಳ ಮುಖಾಂತರ ಹಾಜರಾಗಿ, ಶಿಬಿರಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ. ರಮೇಶ್ ಬಾಬು ಅವರು ತಿಳಿಸಿದ್ದಾರೆ.

# ಕಚೇರಿ ಕಡತಗಳ ವಿಲೇವಾರಿ ದರಪಟ್ಟಿಗಳಿಗೆ ಆಹ್ವಾನ

■ **ಹಂಪಿ ಟೈಮ್ಸ್ ಬಳ್ಳಾರಿ**
ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ 2011ರಿಂದ 2015ರವರೆಗೆ ವಿಲೇವಾರಿಯಾಗಿ ಕಾಲಾವಧಿ ಮೀರಿರುವ ಪ್ರಕರಣಗಳ ಸಂಪೂರ್ಣ ದಾಖಲೆಗಳನ್ನು ಚೂರು ಚೂರುಗೊಳಿಸಿ ಮಾರಾಟ ಮಾಡಲು ಇಚ್ಛಿಸಿದ್ದು, ಆಸಕ್ತಿ ಇರುವವರಿಂದ ದರಪಟ್ಟಿ ಸಲ್ಲಿಸಲು ಆಹ್ವಾನಿಸಲಾಗಿದೆ.
ಹೆಚ್ಚಿನ ದರದಲ್ಲಿ ಖರೀದಿಸಲು ಆಸಕ್ತಿಯುಳ್ಳವರು ದರಪಟ್ಟಿಯನ್ನು ಲಕೋಟೆಯಲ್ಲಿ ಸೀಲ್ ಮಾಡಿ ಅದರ ಮೇಲೆ "ಹಳೆಯ ದಾಖಲೆಗಳ ಖರೀದಿಗಾಗಿ ದರಪಟ್ಟಿ" ಎಂದು ನಮೂದಿಸಿ ಸೀಲ್ ಮಾಡಿದ ದರಪಟ್ಟಿಯನ್ನು ಅಧ್ಯಕ್ಷರು, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಬಳ್ಳಾರಿ, ಇವರಿಗೆ ಡಿ.20 ರಂದು ಸಂಜೆ 5.30ರೊಳಗಾಗಿ ತಲುಪುವಂತೆ ಸಲ್ಲಿಸಬೇಕು.
ನಿಗಧಿತ ದಿನಾಂಕ ಹಾಗೂ ಸಮಯದ ನಂತರ ತಲುಪುವ ದರಪಟ್ಟಿಯನ್ನು ಪರಿಗಣನೆಗೆ ತೆಗೆದುಕೊಳ್ಳದೇ ತಿರಸ್ಕರಿಸಲಾಗುವುದು. ದರಪಟ್ಟಿಯನ್ನು ಅಂಗೀಕರಿಸುವ, ತಿರಸ್ಕರಿಸುವ ಅಥವಾ ಪ್ರಕಟಣೆಯನ್ನು ರದ್ದುಪಡಿಸುವ ಅಧಿಕಾರವನ್ನು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಹೊಂದಿರುತ್ತಾರೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಮತ್ತು ಸಹಾಯಕ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

# ವಿದ್ಯುತ್ ವ್ಯತ್ಯಯ ಡಿ.14ರಂದು

■ **ಹಂಪಿ ಟೈಮ್ಸ್ ಬಳ್ಳಾರಿ**
ಗ್ರಾಮೀಣ ಜೆಸ್ಕಾಂ ಉಪವಿಭಾಗ ವ್ಯಾಪ್ತಿಗೆ ಬರುವ 110 ಕೆ.ವಿ ಮೋಕಾ- ಮೀನಹಳ್ಳಿ ಲಿಲೋ ತುರ್ತುಗಿ ನಿರ್ವಹಣಾ ಕಾರ್ಯ ಕೈಗೆತ್ತಿಕೊಳ್ಳುತ್ತಿರುವುದರಿಂದ ಡಿ.14ರಂದು ಬೆಳಿಗ್ಗೆ 08 ರಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಇಂಜಿನಿಯರ್ ಮೋಹನಬಾಬು ಅವರು ತಿಳಿಸಿದ್ದಾರೆ.
*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳಿವು:*
110/11 ಕೆ.ವಿ ಮೋಕಾ ಉಪ ಕೇಂದ್ರದಿಂದ ಹೊರಡುವ ಎಲ್ಲ ಮಾರ್ಗಗಳು, 110/11 ಕೆ.ವಿ ಮೀನಹಳ್ಳಿ ಉಪ ಕೇಂದ್ರದಿಂದ ಹೊರಡುವ ಎಲ್ಲ ಮಾರ್ಗಗಳು, 33/11 ಕೆ.ವಿ ಯರ್ರಗುಡಿ ಉಪ ಕೇಂದ್ರದಿಂದ ಹೊರಡುವ ಎಲ್ಲ ಮಾರ್ಗಗಳು, ಜಾನಕಿ ಕಾರ್ಪೋರ್ ಪೆ.ಲಿ, ಬಾಸಾಯಿ ಸ್ಟೀಲ್ ಪೆ.ಲಿ, ಕ್ಲೀನ್ ಮ್ಯಾಕ್ಸ್ ಸೋಲಾರ್, ಕ್ಲೀನ್ ಸೋಲಾರ್, ಮೌರ್ಯ ಸಿಲಾಮ ಸೋಲಾರ್ ಐ.ಪಿ.ಪಿ ಇನ್ನೂ ಮುಂತಾದ ಮಾರ್ಗಗಳ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ತಿಳಿಸಿದ್ದಾರೆ.

# ಕುಡತಿನಿ ಭೂ ಸಂತ್ರಸ್ತರ ಪ್ರತಿಭಟನೆಗೆ ಸ್ಪಂದನೆ

■ **ಹಂಪಿ ಟೈಮ್ಸ್ ಬಳ್ಳಾರಿ**



ಕುಡತಿನಿ ಬಳಿ 361 ದಿನಗಳಿಂದ ಪ್ರತಿಭಟನಾ ನಿರತ ಭೂ ಸಂತ್ರಸ್ತರ ಹೋರಾಟದ ಕುರಿತ ವಿಧಾನಪರಿಷತ್ ಸದಸ್ಯ ವೈ.ಎಂ. ಸತೀಸ್ ಅವರು ಸುವರ್ಣಸೌಧದಲ್ಲಿ ಕೇಳಿದ ಪ್ರಶ್ನೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸ್ಪಂದಿಸಿ ಡಿಸೆಂಬರ್ 14ರ ಗುರುವಾರ ಮಧ್ಯಾಹ್ನ 3.30ಕ್ಕೆ ಕೊಠಡಿ ಸಂಖ್ಯೆ 315 ರಲ್ಲಿ ವಿಶೇಷ ಸಭೆಯನ್ನು ಕರೆದಿದ್ದಾರೆ.
ಕುಡತಿನಿಯಲ್ಲಿ ಅರ್ಸೆಲ್ಲರ್ ಮಿತ್ತಲ್, ಉತ್ತಮ್‌ಗಾಲ್ವಾ ಮತ್ತು ಎನ್‌ಎಂಡಿಸಿ ಬೃಹತ್ ಕೈಗಾರಿಕೆಗಳ ಪ್ರಾರಂಭಕ್ಕೆ ಸಾವಿರಾರು ಎಕರೆ ಭೂಮಿಯನ್ನು ಸ್ವಾಧೀನ ಮಾಡಿಕೊಂಡು ದಶಕಗಳು ಕಳೆದರೂ ಕೈಗಾರಿಕೆಗಳು ಪ್ರಾರಂಭವಾಗಿಲ್ಲ. ಭೂ ನಿರಾಶ್ರಿತರು ಕುಡತಿನಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಸದನದಲ್ಲಿ ಡಿಸೆಂಬರ್ 5, 2023 ರಂದು ಸರ್ಕಾರಕ್ಕೆ ಪ್ರಶ್ನೆ ಮಾಡಿದ್ದನ್ನು ನಾವಿಲ್ಲಿ ಸ್ಮರಿಸಬಹುದು.
ವಿಧಾನಪರಿಷತ್ ಸದಸ್ಯ ವೈ.ಎಂ. ಸತೀಶ್ ಅವರು, ಡಿಸೆಂಬರ್ 5ರಂದು ಸದನದ ಮೇಲ್ಮನೆಯಲ್ಲಿ 'ಕುಡತಿನಿ ಬಳಿ 361 ದಿನಗಳಿಂದ ಪ್ರತಿಭಟನಾ ನಿರತ ಭೂ ಸಂತ್ರಸ್ತರ ಹೋರಾಟಗಾರರ ಕುರಿತು ತುರ್ತಾಗಿ ಗಮನಹರಿಸಬೇಕು' ಎಂದು ಮನವಿ ಮಾಡಿದ್ದೆ. ನನ್ನ ಮನವಿಗೆ ಸರ್ಕಾರ ತುರ್ತು ಸ್ಪಂದನೆ ನೀಡಿರುವುದ ಸ್ವಾಗತಾರ್ಹ ಎಂದು ಹೇಳಿದರು.
ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಡಿಸೆಂಬರ್ 14ರ ಗುರುವಾರ ಮಧ್ಯಾಹ್ನ 3.30ಕ್ಕೆ ಕೊಠಡಿ ಸಂಖ್ಯೆ 315 ರಲ್ಲಿ ವಿಶೇಷ ಸಭೆಗೆ ಸಂಡೂರು ಶಾಸಕ ಇ. ತುಕಾರಾಂ, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಅಭಿವೃದ್ಧಿ ಸಚಿವರನ್ನು, ಆರ್ಥಿಕ, ಕಂದಾಯ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಹಿರಿಯ ಅಧಿಕಾರಿಗಳನ್ನು ಮತ್ತು ಬಳ್ಳಾರಿ ಜಿಲ್ಲಾಧಿಕಾರಿಗಳ ಹಾಜರಾತಿಯನ್ನು ಕಡ್ಡಾಯ ಮಾಡಿದ್ದಾರೆ.

# ಪ್ರವಾಸಿಗರಿಗೆ ನೈಜ ಇತಿಹಾಸ ತಿಳಿಸಿ

### ಹಂಪಿ ಮಾರ್ಗದರ್ಶಿಗಳಿಗೆ ಡಿಸಿ ದಿವಾಕರ ಹೇಳಿಕೆ
### ಹಂಪಿಯ ಗೈಡ್‌ಗಳಿಗೆ ಪುನಶ್ಚೇತನ ತರಬೇತಿ ಕಾರ್ಯಾಗಾರ



■ **ಹಂಪಿ ಟೈಮ್ಸ್ ಹೊಸಪೇಟೆ**
ಹಂಪಿ ಪ್ರವಾಸಿ ಮಾರ್ಗದರ್ಶಿಗಳು ಅತ್ಯಂತ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಹೇಳಿದರು.
ವಿಶ್ವ ಪ್ರಸಿದ್ಧ ಹಂಪಿಯ 179 ಪ್ರವಾಸಿ ಮಾರ್ಗದರ್ಶಿಗಳಿಗೆ ಮಂಗಳವಾರ ಕಮಲಾಪುರದ ಹೋಟೆಲ್ ಮಯೂರ ಭುವನೇಶ್ವರಿಯಲ್ಲಿ ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ಪ್ರವಾಸಿ ಮಾರ್ಗದರ್ಶಿಗಳ ಪುನಶ್ವೇತನ ತರಬೇತಿ ಕಾರ್ಯಾಗಾರ' ಉದ್ಘಾಟಿಸಿ ಮಾತನಾಡಿದರು.
ರಾಜ್ಯದಲ್ಲಿ ಅತಿ ಹೆಚ್ಚು ಪ್ರವಾಸಿ ಮಾರ್ಗದರ್ಶಿಗಳು ಹಂಪಿಯಲ್ಲಿದ್ದು, ಐತಿಹಾಸಿಕ ಹಂಪಿಗೆ ಬರುವ ಪ್ರವಾಸಿಗರಿಗೆ ನೈಜ ಇತಿಹಾಸವನ್ನು ತಿಳಿಸಲು, ಗೈಡ್‌ಗಳಿಗೆ ಡಿ.12 ರಿಂದ 14ರ ವರೆಗೆ ಪುನಃಶ್ಚೇತನ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆ, ಸಂಸ್ಕೃತಿ, ಪರಂಪರೆ ಹಾಗೂ ಸ್ಮಾರಕಗಳು, ವಿಜಯನಗರ ಸಾಮ್ರಾಜ್ಯದ ಇತಿಹಾಸ ಹೀಗೆ ಮುಂತಾದ ವಿಷಯಗಳ ಬಗ್ಗೆ ಸಂಪನ್ಮೂಲ ವ್ಯಕ್ತಿಗಳಿಂದ ಮಾಹಿತಿಯನ್ನು ನೀಡಲಾಗುತ್ತಿದೆ. ಈ ತರಬೇತಿಯ ಸದುಪಯೋಗ ಪಡೆದುಕೊಂಡು ಪ್ರವಾಸಿಗರಿಗೆ ಸರಿಯಾದ ಮಾರ್ಗದರ್ಶನ ಸೇವೆ ನೀಡಬೇಕು. ಹಂಪಿಗೆ ಬಂದಂತಹ ಭರವಸೆಯ ಪ್ರವಾಸಿಗರಿಗೆ ಉತ್ತಮ ಸೇವೆ ಜೊತೆಗೆ ಭಾಷೆ ಮತ್ತು ಇತಿಹಾಸದ ಜ್ಞಾನವನ್ನು ಪರಿಪೂರ್ಣವಾಗಿ ಮಾರ್ಗದರ್ಶನ ಮಾಡಬೇಕು ಎಂದು ಹೇಳಿದರು.
ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕ ಪ್ರಭುಲಿಂಗ ತಳಕೇರಿ, ನಿವೃತ್ತ ಎ.ಎಸ್.ಐ ಕೇಶವ ಟಿ.ಎಂ., ಹಂಪಿ ಸಿಪಿಐ ಶಿವರಾಜ್ ಸೇರಿದಂತೆ ಇತರ ಅಧಿಕಾರಿಗಳು, ಪ್ರವಾಸಿ ಮಾರ್ಗದರ್ಶಿಗಳ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಸತಿ ಶಾಲೆಗಳ ಪ್ರವೇಶ ಆನ್‌ಲೈನ್ ಅರ್ಜಿ ಆಹ್ವಾನ

■ **ಹಂಪಿ ಟೈಮ್ಸ್ ಕೊಪ್ಪಳ**
ಕರ್ನಾಟಕವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೊಪ್ಪಳ ಜಿಲ್ಲೆಯ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ ಡಾ.ಬಿ.ಆರ್. ಅಂಬೇಡ್ಕರ್/ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳಿಗೆ 2024-25ನೇ ಶೈಕ್ಷಣಿಕ ವರ್ಷದ ಸಾಲಿಗೆ 6ನೇ ತರಗತಿ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ.
ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿದೆ. ಪ್ರವೇಶ ಪರೀಕ್ಷೆಗಳು 2024ರ ಫೆಬ್ರವರಿ 18 ರಂದು ನಡೆಯಲಿವೆ. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಸಮನ್ವಯಾಧಿಕಾರಿಗಳಾದ ಕೊಪ್ಪಳ, ಶಿ.ಗು ಹಿರೇಮಠ - 9902348569, ಯಲಬುರ್ಗಾ, ವಿರುಪಾಕ್ಷಪ್ಪ ಹನುಮಶೆಟ್ಟಿ - 9986896240, ಕುಷ್ಟಗಿ, ನಾಗರಾಜ ಸಂಗನಾಳ - 7899783582, ಗಂಗಾವತಿ, ರವಿಕುಮಾರ -9740322205, ಜಿಲ್ಲಾ ಸಮನ್ವಯಾಧಿಕಾರಿ ಮಂಜುನಾಥ ಬೇಳೂರು- 9482326285 ಇವರನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA